# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 265 RNI Number : KNKAN/25/A2770 08-10-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:265 ರಾಯಚೂರು 08-10-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563


### ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆ, ಮೇವಿನ ಲಭ್ಯತೆ, ನೀರಾವರಿ ಸಮಸ್ಯೆ, ಕುರಿತು ಅಧಿಕಾರಿಗಳೊಂದಿಗೆ ಸಭೆ

## ರೈತರ ಸಂಕಷ್ಟಕ್ಕೆ ಅಗತ್ಯ ನೆರವು: ಸಚಿವ ಡಾ.ಅಜಯ್ ಧರ್ಮಸಿಂಗ್

ರಾಯಚೂರು ಅ.07

ಈ ವರ್ಷ ತೀವ್ರ ಬರಗಾಲದ ಪರಿಸ್ಥಿತಿಯನ್ನು ರಾಯಚೂರು ಜಿಲ್ಲೆಯಲ್ಲಿ ಎದುರಿಸಲಾಗುತ್ತಿದ್ದು, ನಮ್ಮ ಸರ್ಕಾರ ರೈತರ ಸಂಕಷ್ಟದಲ್ಲಿ ಭಾಗಿಯಾಗಿ ಅವರಿಗೆ ಅಗತ್ಯ ನೆರವು ನೀಡುವ ಕೆಲಸ ಮಾಡುತ್ತಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ಹೇಳಿದರು.



ಅಕ್ಟೋಬರ್ 07ರ ಬುಧವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಯ ಚೂರು ಜಿಲ್ಲೆಯಲ್ಲಿ ಬರ ಪರಿಸ್ಥಿತಿ, ಮುಂದಿನ ಬೇಸಿಗೆಯವರೆಗೆ ಕುಡಿ ಯುವ ನೀರಿನ ಸಮಸ್ಯೆ ಬಾರದಂತೆ ನೀರಿನ ಕಾಯ್ದಿರಿಸುವುದು, ಕೃಷಿ ಚಟುವಟಿಕೆಗಳು, ನೀರಾವರಿ ಸಮಸ್ಯೆಗಳು ಹಾಗೂ ಜಾನುವಾರು ಗಳಿಗೆ ಮೇವಿನ ಲಭ್ಯತೆ ಕುರಿತು ಜನಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆಯ ನಡೆಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ ಶಾಸಕರು ತಮ್ಮ ತಮ್ಮ ತಾಲೂಕಿನ ಸಮಸ್ಯೆ ಗಳ ಬಗ್ಗೆ ಸಲಹೆ ನೀಡಿದ್ದು, ಸರ್ಕಾರವು ರೈತರ ಹಿತ ಕಾಯಲು ಸುಮಾರು 1,550 ಕೋಟಿ ರೂ. ರಾಜ್ಯದಲ್ಲಿ ಘೋಷಿಸಿದ್ದು, ನೇರ ವಾಗಿ ಇನ್ಪುಟ್ ಸಬ್ಸಿಡಿ ಮುಖಾಂತರ ಪ್ರತಿ ರೈತರಿಗೆ 2500 ರೂ. ನೀಡುವ ಕೆಲಸ ಮಾಡಲಾಗುತ್ತಿದೆ. ಇದರ ಜೊತೆಗೆ ಕುಡಿಯುವ ನೀರಿನ ಬರಗಾಲ ಪರಿಸ್ಥಿತಿಯನ್ನು ಎದುರಿಸಲು ರಾಜ್ಯಮಟ್ಟದಲ್ಲಿ ಸುಮಾರು 300 ಕೋಟಿ ರೂ. ನೀಡಲಾಗಿದ್ದು, ರಾಯಚೂರು ಜಿಲ್ಲೆಗೆ ಮೊದಲನೇ ಕಂತಿನಲ್ಲಿ 6 ಕೋಟಿ ಹಾಗೂ ಎರಡನೇ ಕಂತಿನಲ್ಲಿ 5 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದರು.

ಕೇಂದ್ರ ಸರ್ಕಾರದ ಮಾನದಂಡಗಳನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ರಾಜ್ಯದಲ್ಲಿ ಒಟ್ಟು 201 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಕೆಲವು ಕಡೆಗಳಲ್ಲಿ ಮಾನಿಟರಿಂಗ್ ಹಾಗೂ ಇನ್ನು ಕೆಲವು ಕಡೆಗಳಲ್ಲಿ ಸಿವಿಯರ್ ಆಗಿ ಪರಿಗಣಿಸಿ ಮಾರ್ಗಸೂಚಿಗಳನ್ವಯ ಕ್ರಮ ಕೈಗೊಳ್ಳಲಾಗಿದೆ. ರಾಯಚೂರು ಜಿಲ್ಲಾ ಉಸ್ತುವಾರಿಯಾಗಿ ಕೆಲದಿನಗಳ ಹಿಂದೆ ನೇಮಕಗೊಂಡ ನಂತರ, ಪ್ರಜಾಸೇವೆ, ಬರ ವೀಕ್ಷಣೆ, ಸ್ವಾತಂತ್ರ್ಯೋತ್ಸವ ಹಾಗೂ ಹೈದರಾಬಾದ್ ಕರ್ನಾಟಕ ವಿಮೋಚನಾ ದಿನಾಚರಣೆ ಸೇರಿದಂತೆ ವಿವಿಧ ಹಂತಗಳಲ್ಲಿ ಜಿಲ್ಲೆಗೆ ಭೇಟಿ ನೀಡಿ ಇಲ್ಲಿನ ವಿವಿಧ ಸಮಸ್ಯೆಗಳ ಕುರಿತು ಸಮಾಲೋಚನೆ ನಡೆಸಲಾಗಿದೆ ಎಂದರು.

ಅಧಿಕಾರಿಗಳು ಜಿಲ್ಲೆಯ ಎಲ್ಲಾ ಕಡೆಗಳಲ್ಲಿ ಖುದ್ದಾಗಿ ಭೇಟಿ ನೀಡಿ, ಪರಿಶೀಲನೆ ನಡೆಸಿ, ಅಗತ್ಯವಿರುವ ಸಂಪೂರ್ಣ ಮಾಹಿತಿಯನ್ನು ಪಡೆದುಕೊಂಡು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳ

3ನೇಯ ಪುಟಕ್ಕೆ

## ಮಾಧ್ಯಮಗಳ ಮುಂದೆ ಹಗುರವಾಗಿ ಮಾತನಾಡಿದ ಸಮುದಾಯ ಆರೋಗ್ಯ ಅಧಿಕಾರಿಗಳನ್ನು ವಜಾಗೊಳಿಸಿ



ರಾಯಚೂರು ಅ.07 . ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘ ಜಿಲ್ಲಾ ಘಟಕ ರಾಯ ಚೂರು ವತಿಯಿಂದ ಕರ್ನಾಟಕ ರಾಜ್ಯ ಸಮುದಾಯ ಆರೋಗ್ಯ ಅಧಿಕಾರಿಗಳ ಕೇಂದ್ರ ಸಂಘ ಬೆಂಗಳೂರುನಲ್ಲಿ ಹಮ್ಮಿಕೊಂಡಿದ್ದ ಮುಷ್ಕರದಲ್ಲಿ ಆರೋಗ್ಯ ಇಲಾಖೆಯ ಬೆನ್ನೆಲುಬು ಆದ ಆರೋಗ್ಯ ನಿರೀಕ್ಷಣಾಧಿಕಾರಿಗಳ ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಿತ ಅಧಿಕಾರಿಗಳ ಬಗ್ಗೆ ಮಾಧ್ಯಮಗಳ ಮುಂದೆ ಹಗು ರವಾಗಿ ಮಾತನಾಡಿದ ಸಮು ದಾಯ ಆರೋಗ್ಯ ಅಧಿಕಾರಿ ಗಳನ್ನು ವಜಾಗೊಳಿಸಬೇಕೆಂದು ಹಾಗೂ ಸಮುದಾಯ ಆರೋ ಗ್ಯ ಅಧಿಕಾರಿಗಳ ಸಂಘದಿಂದ ಮಾಧ್ಯಮದ ಎದುರಿಗೆ ಬಂದು ಕ್ಷಮೆ ಯಾಚಿಸಬೇಕೆಂದು ರಾ ಯಚೂರು ಜಿಲ್ಲಾ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘ ಆಗ್ರ ಹಿಸಿ ರಾಯಚೂರು ಜಿಲ್ಲೆ ಆ ರೋಗ್ಯ ಮತ್ತು ಕುಟುಂಬ ಕಲ್ಯಾ

3ನೇಯ ಪುಟಕ್ಕೆ


## 25 ವರ್ಷಗಳ ಮೋದಿ ಯುಗ : ಗುಜರಾತ್‌ನಿಂದ ದೆಹಲಿಯವರೆಗೆ ಆಡಳಿತದ ಮೈಲಿಗಲ್ಲು

ನವದೆಹಲಿ, ಅ. 7- ಗುಜರಾತ್ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ದಿನದಿಂದ ಪ್ರಧಾನಿಯಾಗಿ ದೇಶದ ಆಡಳಿತದ ಚುಕ್ಕಾಣಿ ಹಿಡಿದಿರುವವರೆಗೆ ನರೇಂದ್ರ ಮೋದಿ ಅವರ ರಾಜಕೀಯ ಪಯಣಕ್ಕೆ ಇಂದು 25 ವರ್ಷ ಪೂರ್ಣಗೊಂಡಿವೆ. 2001ರ ಅ. 7ರಂದು ಗುಜರಾತ್ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಮೋದಿ ಅವರು, 2014ರಲ್ಲಿ ಪ್ರಧಾನಿಯಾದ ಬಳಿಕ 2019 ಮತ್ತು 2024ರ ಲೋಕಸಭಾ ಚುನಾವಣೆಗಳಲ್ಲಿ ಎನ್‌ಡಿಎ ಸರ್ಕಾರ ರಚಿಸಲು ಅವಕಾಶ ದೊರಕುವಂತೆ ನಾಯಕತ್ವ ವಹಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಬಿಜೆಪಿ ದೇಶಾದ್ಯಂತ ಸೇವಾ ಕಾರ್ಯಕ್ರಮಗಳು, ಯಾತ್ರೆಗಳು, ರ್ಯಾಲಿಗಳು, ಪ್ರದರ್ಶನಗಳು ಹಾಗೂ ವಿವಿಧ ಸಾರ್ವಜನಿಕ ಕಾರ್ಯಕ್ರಮಗಳ ಮೂಲಕ 25 ವರ್ಷಗಳ ಪಯಣವನ್ನು ಜನರ ಮುಂದಿಡುತ್ತಿದೆ. ದೆಹಲಿಯಲ್ಲೂ ಸೇವಾ ಜ್ಯೋತಿ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ಸಿದ್ದತೆ ನಡೆದಿದ್ದು, ಹಲವು ಪ್ರಮುಖ ಬಿಜೆಪಿ ನಾಯಕರು ಹಾಗೂ ಕೇಂದ್ರ ಸಚಿವರು ಭಾಗವಹಿಸಲಿದ್ದಾರೆ.

ಗುಜರಾತ್‌ನಿಂದ ದೆಹಲಿಯವರೆಗೆ

ಮೋದಿ ಅವರ ರಾಜಕೀಯ ಪಯಣದ ಪ್ರಮುಖ ಅಂಶವೆಂದರೆ ಗುಜರಾತ್‌ನಲ್ಲಿ ಕೈಗೊಂಡ ವಿವಿಧ ಆಡಳಿತಾತ್ಮಕ ಉಪಕ್ರಮಗಳನ್ನು ರಾಷ್ಟ್ರೀಯ ಮಟ್ಟಕ್ಕೆ ವಿಸ್ತರಿಸುವ ಪ್ರಯತ್ನ. 2001ರಲ್ಲಿ ಮುಖ್ಯಮಂತ್ರಿಯಾದಾಗ ಗುಜರಾತ್ ಭೂಕಂಪ, ಬರ, ಚಂಡಮಾರುತ ಹಾಗೂ ರಾಜಕೀಯ ಅಸ್ಥಿರತೆಯಂತಹ ಸವಾಲುಗಳನ್ನು ಎದುರಿಸುತ್ತಿತ್ತು.



ಅ. 6ರಂದು ಕೇಂದ್ರ ಸಚಿವ ಸಂಪುಟ ಅಂಗೀಕರಿಸಿದ ನಿರ್ಣಯದಲ್ಲಿ ಸ್ವಾಗತ್, ಜ್ಯೋತಿಗ್ರಾಮ್‌ನಂತಹ ಗುಜರಾತ್‌ನ ಕಾರ್ಯಕ್ರಮಗಳು ನಂತರ ರಾಷ್ಟ್ರೀಯ ಮಟ್ಟದ ವಿವಿಧ ಆಡಳಿತಾತ್ಮಕ ವಿಧಾನಗಳಿಗೆ ಪ್ರೇರಣೆಯಾದವು ಎಂದು ಉಲ್ಲೇಖಿಸಲಾಗಿದೆ. ಜಿಎಸ್‌ಟಿ, ಕಲ್ಯಾಣ ಯೋಜನೆಗಳ ಡಿಜಿಟಲೀಕರಣ, ಮೂಲಸೌಕರ್ಯ, ಯುಪಿಐ, ಜನಧನ್, ಪಿಎಂ-ಕಿಸಾನ್, ಮಹಿಳಾ ಸಬಲೀಕರಣ, ಬಾಹ್ಯಾಕಾಶ ಮತ್ತು ರಕ್ಷಣಾ ಕ್ಷೇತ್ರದ ಕ್ರಮಗಳನ್ನೂ ಮೋದಿ ಅವರ ಆಡಳಿತದ ಪ್ರಮುಖ ಅಂಶಗಳಾಗಿ ನಿರ್ಣಯದಲ್ಲಿ ಉಲ್ಲೇಖಿಸಲಾಗಿದೆ.

25 ವರ್ಷಗಳ ಆಚರಣೆ ಕೇವಲ ಆಡಳಿತದ ಸಾಧನೆಗಳ ಪಟ್ಟಿಯಲ್ಲ. ಮೋದಿ ಅವರ ವೈಯಕ್ತಿಕ ನಾಯಕತ್ವವನ್ನು ಕೇಂದ್ರವಾಗಿಟ್ಟುಕೊಂಡು ತಮ್ಮ 'ಆಡಳಿತದ' ಕಥನವನ್ನು ಜನರಿಗೆ ತಲುಪಿಸುವ ಬಿಜೆಪಿಯ ಸಂಘಟನಾ ಪ್ರಯತ್ನವೂ ಇದಾಗಿದೆ. 'ರಾಷ್ಟ್ರ ಮೊದಲು', 'ನಾಗರಿಕ ಮೊದಲು', 'ವಿಕಸಿತ ಭಾರತ' 2047, ಆತ್ಮನಿರ್ಭರ ಭಾರತ, ಡಿಜಿಟಲ್ ಭಾರತ ಮತ್ತು ಮೂಲಸೌಕರ್ಯ ಅಭಿವೃದ್ಧಿಯಂತಹ ಸಂದೇಶಗಳನ್ನು 25 ವರ್ಷಗಳ ಪಯಣದೊಂದಿಗೆ ಜೋಡಿಸಲಾಗುತ್ತಿದೆ. ಸಂಪುಟ ನಿರ್ಣಯದಲ್ಲಿಯೂ ಸಾರ್ವಜನಿಕ ಬಂಡವಾಳ ವೆಚ್ಚದ ಏರಿಕೆ, ಹೆದ್ದಾರಿ ಮತ್ತು ರೈಲ್ವೆ ವಿಸ್ತರಣೆ, ಎಲೆಕ್ಟ್ರಾನಿಕ್ಸ್ ಉತ್ಪಾದನೆ, ಯುಪಿಐ ಹಾಗೂ ಚಂದ್ರಯಾನ-3 ಮುಂತಾದವುಗಳನ್ನು ಉಲ್ಲೇಖಿಸಲಾಗಿದೆ.

ಮುಂದಿನ ರಾಜಕೀಯ ಸಂದೇಶವೇನು?

ಈ ಆಚರಣೆಯ ಪ್ರಮುಖ ರಾಜಕೀಯ ಅಂಶವೆಂದರೆ 2029ರ ಲೋಕಸಭಾ ಚುನಾವಣೆಗೆ ಮುನ್ನ ರೂಪುಗೊಳ್ಳಲಿರುವ ರಾಜಕೀಯ ಕಥನದ ಮುನ್ನೋಟ. ಮೋದಿ ಅವರ 25 ವರ್ಷಗಳ ಪಯಣವನ್ನು ಬಿಜೆಪಿ ಸ್ಥಿರತೆ, ನಿರಂತರತೆ ಮತ್ತು ಅಭಿವೃದ್ಧಿಯೊಂದಿಗೆ ಜೋಡಿಸುತ್ತಿದ್ದರೆ, ವಿರೋಧ ಪಕ್ಷಗಳು ಆಡಳಿತದ ದೀರ್ಘಾವಧಿಯ ಪರಿಣಾಮಗಳು ಹಾಗೂ ಬಾಕಿ ಉಳಿದಿರುವ ಸಾಮಾಜಿಕ-ಆರ್ಥಿಕ ಪ್ರಶ್ನೆಗಳನ್ನು ಮುನ್ನೆಲೆಗೆ ತರುವ ಸಾಧ್ಯತೆ ಇದೆ. ಹೀಗಾಗಿ, ಇಂದು ನಡೆಯುತ್ತಿರುವ 25ನೇ ವರ್ಷದ ಆಚರಣೆ ಕೇವಲ ಸ್ಮರಣಾರ್ಥ ಕಾರ್ಯಕ್ರಮಕ್ಕಿಂತ ಹೆಚ್ಚಿನ ರಾಜಕೀಯ ಅರ್ಥವನ್ನು ಹೊಂದಿದೆ.

ಒಟ್ಟಿನಲ್ಲಿ, ಮೋದಿ ಅವರ 25 ವರ್ಷಗಳ ಆಡಳಿತ ಪಯಣವು ಗುಜರಾತ್ ಮುಖ್ಯಮಂತ್ರಿಯಿಂದ ಭಾರತದ ಪ್ರಧಾನಮಂತ್ರಿವರೆಗೆ ಸಾಗಿದ ದೀರ್ಘ ರಾಜಕೀಯ ಪಯಣವಾಗಿದೆ. ಈ ಪಯಣದ ಮುಂದಿನ ಅಧ್ಯಾಯವನ್ನು ವಿಕಸಿತ ಭಾರತ 2047 ಎಂಬ ಗುರಿಯೊಂದಿಗೆ ಹೇಗೆ ಜೋಡಿಸಲಾಗುತ್ತದೆ ಎಂಬುದು ರಾಜಕೀಯವಾಗಿ ಗಮನಾರ್ಹವಾಗಿದೆ.

## ರೈತರಿಗೆ ಪ್ರತಿ ಎಕರೆಗೆ ₹25 ಸಾವಿರ ಪರಿಹಾರ ನೀಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಹೋರಾಟ



ರಾಯಚೂರು

ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ರೈತರಿಗೆ ಪ್ರತಿ ಎಕರೆಗೆ ₹25 ಸಾವಿರ ಬೆಳೆ ಪರಿಹಾರ ನೀಡಬೇಕು, ಕೃಷಿ ಸಾಲ ಸಂಪೂರ್ಣ ಮನ್ನಾ ಮಾಡಬೇಕು ಹಾಗೂ ಪಂಪ್‌ಸೆಟ್‌ಗಳಿಗೆ ನಿರಂತರ 12 ಗಂಟೆ ವಿದ್ಯುತ್ ಪೂರೈಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ಪದಾಧಿಕಾರಿಗಳು ಬುಧವಾರ ನಗರದ ಟಿಪ್ಪು ಸುಲ್ತಾನ್ ಉದ್ಯಾನವನ ದಲ್ಲಿ ಪ್ರತಿಭಟನೆ ನಡೆಸಿದರು.

ಜಿಲ್ಲೆಯಲ್ಲಿ ಮೇ ತಿಂಗಳಿನಿಂದ ಸಮರ್ಪಕ ಮಳೆಯಾಗದೆ ಬೆಳೆಗಳು ಒಣಗುತ್ತಿವೆ. ಮಳೆ ಕೊರತೆಯಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸಾಲದ ಸುಳಿಯಲ್ಲಿ ಸಿಲುಕಿದ್ದಾರೆ. ಕೂಡಲೇ ಸರ್ಕಾರ ರೈತರ ನೆರವಿಗೆ ಧಾವಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ರಾಷ್ಟ್ರೀಕೃತ ಹಾಗೂ ರಾಜ್ಯದ ವಿವಿಧ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು. ಪ್ರತಿ ಎಕರೆಗೆ ₹25 ಸಾವಿರ ಬೆಳೆ ಪರಿಹಾರ ನೀಡಬೇಕು. ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಗತ್ಯ ಪ್ರಮಾಣದ ಮೇವು ಒದಗಿಸಬೇಕು ಎಂದು ಆಗ್ರಹಿಸಿದರು.

3ನೇಯ ಪುಟಕ್ಕೆ

### ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ: ಉಚಿತ ಆರೋಗ್ಯ ತಪಾಸಣಾ ಶಿಬಿರ

## ಭಾರತೀಯ ಪರಂಪರೆಯ ಆಯುರ್ವೇದ ಚಿಕಿತ್ಸೆಯಿಂದ ಆರೋಗ್ಯ ವೃದ್ಧಿ : ಕೇಶವ ರೆಡ್ಡಿ

ರಾಯಚೂರು, ಅ.7: ಭಾರತೀಯ ಪರಂಪರೆಯ ಆಯುರ್ವೇದ ಚಿಕಿತ್ಸಾ ಪದ್ಧತಿ ಆರೋಗ್ಯ ಸಂರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ.ಆಯುರ್ವೇದ ಚಿಕಿತ್ಸಾ ಪದ್ದತಿಯ ಮಹತ್ವದ ಬಗ್ಗೆ ಸಾಮಾನ್ಯ ಜನರಿಗೆ ಹೆಚ್ಚು ಜಾಗೃತಿ ಮೂಡಿಸಬೇಕಾಗಿದೆ. ಆಧುನಿಕ ಚಿಕಿತ್ಸಾ ಪದ್ಧತಿಗಳು ವ್ಯಾಪಕವಾಗುವುದಕ್ಕೂ ಮುನ್ನ ನಮ್ಮ ಪೂರ್ವಜರು ಆಯುರ್ವೇದ ಸೇರಿದಂತೆ ಸಾಂಪ್ರದಾಯಿಕ ಚಿಕಿತ್ಸಾ ಪದ್ಧತಿಗಳನ್ನು ಅವಲಂಬಿಸಿದ್ದರು ಎಂದು ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಕೇಶವ ರೆಡ್ಡಿ ಹೇಳಿದರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ2026ರ ಅಂಗವಾಗಿ ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಕರ್ತರಿಗಾಗಿ ಆಯೋಜಿಸಿದ್ದ ಉಚಿತ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ಜನರಿಗೆ ಗುಣಮಟ್ಟದ ಚಿಕಿತ್ಸೆ ಮತ್ತು ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ರಾಯಚೂರಿನಲ್ಲಿ ಸುಸಜ್ಜಿತ ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಆಸ್ಪತ್ರೆಯನ್ನ ಆರಂಭಿಸಲಾಗಿದೆ. ಪತ್ರಕರ್ತರು , ಸಾರ್ವಜನಿಕರು



ಕಡಿಮೆ ವೆಚ್ಚದಲ್ಲಿ ಉತ್ತಮ ಚಿಕಿತ್ಸೆ ಯನ್ನ ಪಡೆಯಬಹುದು. ಆಯುರ್ವೇದ ಚಿಕಿತ್ಸೆಯ ಮಹತ್ವವನ್ನು ಜನರಿಗೆ ತಲುಪಿಸಬೇಕೆಂಬ ಆಶಯ ಸಂಸ್ಥೆಯ ಸೇವಾ ಚಟುವಟಿಕೆಗಳಿಗೆ ಪ್ರೇರಣೆಯಾಗಿದೆ. ಆಯುರ್ವೇದವು ಭಾರತೀಯ ವೈದ್ಯಕೀಯ ಪರಂಪರೆಯ ಪ್ರಮುಖ ಭಾಗವಾಗಿದೆ. ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜನ್ನು ಕೇವಲ ದುಡ್ಡು ಮಾಡುವ ಉದ್ದೇಶದಿಂದ ಸ್ಥಾಪಿಸಿಲ್ಲ, ಸಾರ್ವಜನಿಕರಿಗೆ ಸೇವೆ ಸಲ್ಲಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಆರ್ಥಿಕವಾಗಿ ಹಿಂದುಳಿದವರಿಗೆ ಚಿಕಿತ್ಸೆ ಪಡೆಯಲು ಹಣಕಾಸಿನ ತೊಂದರೆ ಎದುರಾದರೆ ಅಂತಹ ಅರ್ಹ ಬಡ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲು ಸಂಸ್ಥೆ ಸಿದ್ಧವಿದೆ. ಅವರ ಚಿಕಿತ್ಸೆ ಗೆ ಅಗತ್ಯವಾಗುವ ವೆಚ್ಚವನ್ನು ಕಾಲೇಜು ವತಿಯಿಂದ ಭರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕೇಶವ ರೆಡ್ಡಿ ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲ ಚಂದ್ರಶೇಖರ ಕರ್ಮುಡಿ ಮಾತನಾಡಿ, ಕಾಲೇಜು ಮತ್ತು ಆಸ್ಪತ್ರೆಯ ಕಾರ್ಯಚಟುವಟಿಕೆಗಳನ್ನು ಸಂಬಂಧಪಟ್ಟ ನಿಯಮ ಹಾಗೂ ಕಾನೂನುಗಳ ಅನುಸಾರ ನಡೆಸಲಾಗುತ್ತಿದೆ. ಆಯುರ್ವೇದದಲ್ಲಿ ವಿವಿಧ ಕಾಯಿಲೆಗಳಿಗೆ ಚಿಕಿತ್ಸಾ ವಿಧಾನಗಳು ಲಭ್ಯವಿದ್ದು, ಕೂದಲು ಉದುರುವಿಕೆ, ಪಾರ್ಶ್ವ ವಾಯು, ಮೂಲವ್ಯಾಧಿ (ಪೈಲ್ಸ್) ಸಂಧಿವಾತ, ಬೆನ್ನು ನೋವಿನ ಸಮಸ್ಯೆಗೂ ಆಯುರ್ವೇದದಲ್ಲಿ ಪರಿಣಾಮಕಾರಿ ಚಿಕಿತ್ಸಾ ವಿಧಾನಗಳಿವೆ ಎಂದರು.

3ನೇಯ ಪುಟಕ್ಕೆ

## ಬಾಲಕಿಯರ ವಸತಿ ನಿಲಯ ಗಬ್ಬೂರು ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಮನವಿ

ರಾಯಚೂರು,ಅ.07-

ಇಂದು ಜೈ ಭೀಮ್ ಅಖಿಲ ಭಾರತ ದಲಿತ ಹೋರಾಟ ಸಮಿತಿ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಮನವಿ ಸಲ್ಲಿಸಿ ದೇವದುರ್ಗ ತಾಲೂಕಿನ ಗಬ್ಬೂರು ಗ್ರಾಮದ ಭಾರತ ರತ್ನ ಡಾ ಬಿ ,ಆರ್,ಅಂಬೇಡ್ಕರ್ ಸರಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯವು ದಿನಾಂಕ : 04-09-2026 ರಂದು ವಸತಿ ನಿಲಯದ





ಮೇಲ್ಛಾವಣಿ ಕುಸಿದು ವಿದ್ಯಾರ್ಥಿನಿಯರು ಗಾಯ ಗೊಂಡಿರುವದು ಹಾಗೂ ಈ ಘಟನೆ ನಡೆದಿರುವುದು ತಮಗೆಲ್ಲ ತಿಳಿದಿರುವ ವಿಷಯ ಈ ಘಟನೆ ನಡೆದ ನಂತರ ವಸತಿ ನಿಲಯದ ವಿದ್ಯಾರ್ಥಿನಿಯರು ತಮ್ಮ ತಮ್ಮ ಊರುಗಳಿಗೆ ಹೋಗಿರುತ್ತಾರೆ ಶಾಲೆಗೆ ದಿನಾಲು ತಮ್ಮ ತಮ್ಮ ಊರಿನಿಂದ ಬಂದು ಹೋಗುತ್ತಿದ್ದಾರೆ ವಿದ್ಯಾರ್ಥಿನಿಯರು ಹಾಗೂ ಅವರ ಪಾಲಕರು ಗಾಬರಿಯಾಗಿ ಇಲ್ಲಿಯವರೆಗೆ ವಸತಿ ನಿಲಯಕ್ಕೆ ತಮ್ಮ ಮಕ್ಕಳನ್ನು ಕಳಿಸಿರುವುದಿಲ್ಲ ಕಾರಣ ಕೂಡಲೇ ವಿದ್ಯಾರ್ಥಿನಿಯರಿಗೆ ಅನುಕೂಲಕರವಾಗಿ ಬಾಡಿಗೆ ಕಟ್ಟಡ ಹುಡುಕಿ ಸ್ಥಳಾಂತರಿಸಬೇಕು ಎಂದು ದಿನಾಂಕ : 16-09-2026 ರಂದು ಮಾನ್ಯ ತಹಸೀಲ್ದಾರರು ಹಾಗೂ ತಾಲೂಕು ಸಮಾಜ ಕಲ್ಯಾಣ ಅಧಿಕಾರಿಗಳು ಗಬ್ಬೂರು ಗ್ರಾಮದ ಶ್ರೀ ಪಂಪನಗೌಡ ಪೋಲಿಸ್ ಪಾಟೀಲ್ ಇವರ ಕಟ್ಟಡಗೆ ಬೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿರುತ್ತಾರೆ ಮತ್ತು ಈ ಕಟ್ಟಡವು ಸುಸರ್ಜಿತ ಹಾಗೂ ಮೂಲ ಭೂತ ಸೌಕರ್ಯವನ್ನು ಹೊಂದಿದೆ ವಿದ್ಯಾರ್ಥಿನಿಯರ ಸರ್ಕಾರಿ ಪ್ರಾರ್ಥಮಿಕ ಹಾಗೂ ಪ್ರೌಢ ಶಾಲೆಗೆ ಹತ್ತಿರ ಹಾಗೂ ಹೊಂದಿಕೊಂಡಿರುತ್ತದೆ ಸುತ್ತಮೂತ್ತಲಿನ ವಾತವರಣ ಹಾಗೂ ಆಟದ ಮೈದಾನ ಮತ್ತು ಕುಟುಂಬಗಳು ವಾಸ ಮಾಡುವ ಮನೆಗಳು ಇರುತ್ತವೆ ಹಾಗೂ ಸದರಿ ಪಂಪನಗೌಡ ಇವರು ಈ ಹಿಂದೆ ಮೂರಾರ್ಜಿ ದೇಸಾಯಿ ಮಾದರಿವಸತಿ ಶಾಲೆಗೆ ಹಾಗೂ ಬಾಲಕ ಮೇಟ್ರೀಕ್ ಪೂರ್ವ ವಸತಿ ನಿರ್ವಹಣೇ ಮಾಡಿದ ಅನುಭವ ಇರುತ್ತದೆ ,ಹಾಗಾಗಿ ಪಂಪನಗೌಡ

3ನೇಯ ಪುಟಕ್ಕೆ

## ಸಮಾಜ ಸೇವೆ, ಸಂಘಟನೆ ಹಾಗೂ ಯುವಶಕ್ತಿಗೆ ಮತ್ತಷ್ಟು ಬಲ: ಶಿವರಾಜಗೌಡ ಬಸವರಾಜ ಅವರಿಗೆ ಮಹತ್ವದ ಜವಾಬ್ದಾರಿ

ರಾಯಚೂರು, ಅ.4: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ (ರಿ.), ಬೆಂಗಳೂರು ಇದರ ರಾಯಚೂರು ಜಿಲ್ಲಾ ಘಟಕದ ಯುವ ವಿಭಾಗದ ಕಾರ್ಯದರ್ಶಿಯಾಗಿ ಶ್ರೀ ಶಿವರಾಜಗೌಡ ತಂ. ಬಸವರಾಜ ಅವರನ್ನು ನೇಮಕ ಮಾಡಿರುವುದು ಸಮಾಜದ ಯುವಶಕ್ತಿಯನ್ನು ಸಂಘಟಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ.



ಸಮಾಜದ ಸಂಘಟನೆ, ಯುವಕರಲ್ಲಿ ಜಾಗೃತಿ ಮೂಡಿಸುವುದು ಹಾಗೂ ವೀರಶೈವ ಲಿಂಗಾಯತ ಮಹಾಸಭೆಯ ★ಗುರಿ ಮತ್ತು ಧ್ಯೇಯೋದ್ದೇಶಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಶಿವರಾಜಗೌಡ ಅವರಿಗೆ ಈ ಮಹತ್ವದ ಜವಾಬ್ದಾರಿ ವಹಿಸಲಾಗಿದೆ.

ಸರಳತೆ, ಸಂಘಟನಾ ಮನೋಭಾವ ಹಾಗೂ ಸಮಾಜಮುಖಿ ಚಿಂತನೆಯೊಂದಿಗೆ ಕಾರ್ಯನಿರ್ವಹಿಸುವ ಶಿವರಾಜಗೌಡ ಅವರು ಯುವಕರನ್ನು ಒಗ್ಗೂಡಿಸಿ, ಸಮಾಜದ ಅಭಿವೃದ್ಧಿ ಹಾಗೂ ಶೈಕ್ಷಣಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೊಸ ಚೈತನ್ಯ ತುಂಬುವ ನಿರೀಕ್ಷೆ ಮೂಡಿಸಿದ್ದಾರೆ.

ವಿಶೇಷವಾಗಿ ಇಂದಿನ ಯುವಪೀಳಿಗೆಯನ್ನು ಸಮಾಜದ ಸಂಘಟನೆಯೊಂದಿಗೆ ಬೆಸೆಯುವ ಮೂಲಕಯುವಶಕ್ತಿಯನ್ನು ಸಮಾಜದ ಪ್ರಗತಿಯ ಶಕ್ತಿಯಾಗಿ ಪರಿವರ್ತಿಸುವಲ್ಲಿ ಶಿವರಾಜಗೌಡ ಅವರ ಪಾತ್ರ ಮಹತ್ವದ್ದಾಗಲಿದೆ ಎಂದು ಸಮಾಜದ ಮುಖಂಡರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಆಶಯಗಳನ್ನು ಜಿಲ್ಲೆಯಲ್ಲಿ ಮತ್ತಷ್ಟು ಪರಿಣಾಮಕಾರಿಯಾಗಿ ಮುನ್ನಡೆಸುವ ಜೊತೆಗೆ, ಯುವ ಸಮುದಾಯದ ಸಮಸ್ಯೆಗಳಿಗೆ ಸ್ಪಂದಿಸುವುದು, ಪ್ರತಿಭಾವಂತ ಯುವಕರಿಗೆ ಪ್ರೋತ್ಸಾಹ ನೀಡುವುದು ಹಾಗೂ ಸಮಾಜದಲ್ಲಿ ಒಗ್ಗಟ್ಟು ಮತ್ತು ಸಹೋದರತ್ವದ ಭಾವನೆ ಬೆಳೆಸುವ ನಿಟ್ಟಿನಲ್ಲಿ ಅವರು ಶ್ರಮಿಸಲಿದ್ದಾರೆ.

ಈ ನೇಮಕಾತಿ ಶಿವರಾಜಗೌಡ ಅವರ ಮೇಲಿನ ವಿಶ್ವಾಸ ಮತ್ತು ಅವರ ಸಾಮಾಜಿಕ ಬದ್ಧತೆಗೆ ದೊರೆತ ಗೌರವ★ವಾಗಿದೆ ಎಂದು ಅಭಿಪ್ರಾಯ ವ್ಯಕ್ತವಾಗಿದ್ದು, ಅವರ ನೇಮಕಕ್ಕೆ ಸಮಾಜದ ವಿವಿಧ ಮುಖಂಡರು, ಗಣ್ಯರು ಹಾಗೂ ಯುವಕರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

3ನೇಯ ಪುಟಕ್ಕೆ

# ಶರಣಬಸವೇಶ್ವರ ದೇವಸ್ಥಾನ, ದಾಸೋಹ ಮಹಾಮನೆಯ ಸಮಗ್ರ ಮ್ಯಾಪಿಂಗ್‌ಗೆ ಚಾಲನೆ

ಕಲಬುರಗಿ,ಅ.07-

ವಿಶ್ವ ವಾಸ್ತುಶಿಲ್ಪ ದಿನಾಚರಣೆ ಅಂಗವಾಗಿ ಶರಣಬಸವ ವಿಶ್ವವಿದ್ಯಾಲಯದ ವಾಸ್ತುಶಿಲ್ಪ ವಿಭಾಗದಿಂದ ನಗರದ ಐತಿಹಾಸಿಕ ಶರಣಬಸವೇಶ್ವರ ದೇವಸ್ಥಾನ ಹಾಗೂ ದಾಸೋಹ ಮಹಾಮನೆಯ ಸಮಗ್ರ ನಕ್ಷೆ ರೂಪಿಸುವ (ಮ್ಯಾಪಿಂಗ್) ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಪೂಜ್ಯ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ಮ್ಯಾಪಿಂಗ್ ಕಾರ್ಯಕ್ಕೆ ಚಾಲನೆ ನೀಡಿದರು.

ಬೆಂಗಳೂರಿನ ಕ್ರೈಸ್ಟ್ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಆರ್ಕಿಟೆಕ್ಚರ್‌ನ ಹಿರಿಯ ಪ್ರಾಧ್ಯಾಪಕ ಹಾಗೂ ಖ್ಯಾತ ವಾಸ್ತುಶಿಲ್ಪಿ ಪ್ರೊ. ಅಜಯ್ ಚಂದ್ರನ್ ಸಿ.ಕೆ. ಸೇರಿದಂತೆ ಹಿರಿಯ ವಾಸ್ತುಶಿಲ್ಪಿಗಳ ಮಾರ್ಗದರ್ಶನದಲ್ಲಿ ವಾಸ್ತುಶಿಲ್ಪ ವಿಭಾಗದ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ದೇವಸ್ಥಾನ ಮತ್ತು ಅದರ ಸಮಗ್ರ ಸಂಕೀರ್ಣದ ವಾಸ್ತುಶಿಲ್ಪ, ವಿನ್ಯಾಸ ಹಾಗೂ ಐತಿಹಾಸಿಕ ವಿವರಗಳನ್ನು ದಾಖಲಿಸುವ ಕಾರ್ಯ ಕೈಗೊಂಡಿದ್ದಾರೆ. ಹಿರಿಯ ವಾಸ್ತುಶಿಲ್ಪಿ ಕಲ್ಯಾಣಿ ಅವರೂ ಈ ಕಾರ್ಯಕ್ಕೆ ಮಾರ್ಗದರ್ಶನ ನೀಡುತ್ತಿದ್ದಾರೆ.




ಶರಣಬಸವೇಶ್ವರ ದೇವಸ್ಥಾನದೊಂದಿಗೆ ಕಲ್ಯಾಣ ಕರ್ನಾಟಕದ ಇತಿಹಾಸದಲ್ಲಿ ಮಹತ್ವದ ಸ್ಥಾನ ಹೊಂದಿರುವ ದಾಸೋಹ ಮಹಾಮನೆಯನ್ನೂ ಮ್ಯಾಪಿಂಗ್ ಕಾರ್ಯದಲ್ಲಿ ಸೇರಿಸಲಾಗಿದೆ.

18ನೇ ಶತಮಾನದ ಸಂತ ಶರಣಬಸವೇಶ್ವರರು ಬಡವರು ಹಾಗೂ ಅಗತ್ಯವಿರುವವರಿಗೆ ಉಚಿತವಾಗಿ ಅನ್ನ ನೀಡುವ ದಾಸೋಹವನ್ನು ಜೀವನ ಪದ್ಧತಿಯಾಗಿ ರೂಪಿಸಿದ್ದರು. ಶರಣಬಸವೇಶ್ವರರು ತಮ್ಮ ಜೀವನದ ಬಹುಭಾಗವನ್ನು ಕಲಬುರಗಿಯಲ್ಲೇ ಕಳೆದಿದ್ದು, ಮಹಾಮನೆಯಲ್ಲಿ ವಾಸವಾಗಿದ್ದರು ಎನ್ನಲಾಗುತ್ತದೆ.

ಸುಮಾರು 250 ವರ್ಷಗಳ ಹಿಂದೆ ಶರಣಬಸವೇಶ್ವರರು ಬೆಳಗಿಸಿದ ನಂದಾದೀಪ ಇಂದಿಗೂ ಮಹಾಮನೆಯಲ್ಲಿ ನಿರಂತರವಾಗಿ ಬೆಳಗುತ್ತಿರುವುದು ಈ ಸ್ಥಳದ ಐತಿಹಾಸಿಕ ಹಾಗೂ ಆಧ್ಯಾತ್ಮಿಕ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿದೆ.

ಇದೇ ಮಹಾಮನೆಗೆ 1927ರ ಫೆಬ್ರವರಿ 26ರಂದು ಮಹಾತ್ಮ ಗಾಂಧೀಜಿ ಭೇಟಿ ನೀಡಿ, ಸಂಸ್ಥಾನದ 7ನೇ ಪೀಠಾಧಿಪತಿಗಳಾಗಿದ್ದ ಲಿಂಗೈಕ್ಯ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರನ್ನು ಭೇಟಿಯಾಗಿದ್ದರು.

ಶರಣಬಸವೇಶ್ವರ ದೇವಸ್ಥಾನದ ಮೇಲೆ ರಜಾಕಾರರು ನಡೆಸಿದ ದಾಳಿಯನ್ನು ಖಂಡಿಸಿ ತಮ್ಮ ಆಕ್ರೋಶ ವ್ಯಕ್ತಪಡಿಸುವ ಉದ್ದೇಶದಿಂದ ಗಾಂಧೀಜಿ ಅವರು ಮಹಾಮನೆಗೆ ಭೇಟಿ ನೀಡಿದ್ದರು ಎಂದು ತಿಳಿಸಲಾಯಿತು.

ಐತಿಹಾಸಿಕ ಕಟ್ಟಡಗಳು ಮತ್ತು ಪರಂಪರೆಯ ತಾಣಗಳ ವಾಸ್ತುಶಿಲ್ಪ, ವಿನ್ಯಾಸ ಹಾಗೂ ಸಾಂಸ್ಕೃತಿಕ ಮಹತ್ವವನ್ನು ವೈಜ್ಞಾನಿಕವಾಗಿ ದಾಖಲಿಸುವ ಉದ್ದೇಶದಿಂದ ಕೈಗೊಂಡಿರುವ ಈ ಮ್ಯಾಪಿಂಗ್ ಕಾರ್ಯವು ಮುಂದಿನ ಪೀಳಿಗೆಗೆ ಕಲಬುರಗಿಯ ಶ್ರೀಮಂತ ಪರಂಪರೆಯನ್ನು ಪರಿಚಯಿಸುವಲ್ಲಿ ಮಹತ್ವದ ಹೆಜ್ಜೆಯಾಗಲಿದೆ.

ಈ ಸಂದರ್ಭದಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ, ಪ್ರೊ. ಅಜಯ್ ಚಂದ್ರನ್, ವಾಸ್ತುಶಿಲ್ಪ ವಿಭಾಗದ ಡೀನ್ ಪ್ರೊ. ವೈಭವಕುಮಾರ ನವಣಿ, ವಿಭಾಗದ ಮುಖ್ಯಸ್ಥೆ ಪ್ರೊ. ಪಲ್ಲವಿ ಪಾಟೀಲ, ಪ್ರೊ. ಗೌತಮ್, ಸಂಯೋಜಕ ಪ್ರೊ. ಸಿದ್ದಲಿಂಗ ಮಂಠಾಳೆ ಸೇರಿದಂತೆ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ ಹಾಗೂ ಬಸವರಾಜ ದೇಶಮುಖ ಅವರು ವಾಸ್ತುಶಿಲ್ಪ ವಿಭಾಗದ ವಿವಿಧ ಚಟುವಟಿಕೆಗಳ ವಿವರಗಳನ್ನು ಒಳಗೊಂಡ ಆರ್ಕಿಟೆಕ್ಚರ್ ಮ್ಯಾಗಜಿನ್ 2025-26 ಅನ್ನು ಬಿಡುಗಡೆ ಮಾಡಿದರು.

# ತಾಂತ್ರಿಕ ದೋಷ; ತೊಗರಿ ಜಮೀನಿನಲ್ಲಿ ತುರ್ತು ಭೂಸ್ಪರ್ಶ ಮಾಡಿದ ತರಬೇತಿ ಲಘು ವಿಮಾನ



ಕಲಬುರಗಿ,ಅ.07-

ನಗರದ ಸೇಡಂ ರಸ್ತೆಯಲ್ಲಿರುವ ವಿಮಾನ ನಿಲ್ದಾಣದ ಸಮೀಪ ತಾಂತ್ರಿಕ ದೋಷದ ಕಾರಣ ತರಬೇತಿ ಲಘು ವಿಮಾನವೊಂದು ತೊಗರಿ ಜಮೀನಿನಲ್ಲಿ ತುರ್ತು ಭೂಸ್ಪರ್ಶವಾಗಿರುವ ಘಟನೆ ಮಂಗಳವಾರ ಸಂಜೆ ನಡೆದಿದೆ.

ವಿಮಾನ ನಿಲ್ದಾಣದ ಸಮೀಪ ಸೇಡಂ ರಸ್ತೆಯ ಪಕ್ಕದಲ್ಲಿರುವ ತೊಗರಿ ಜಮೀನಿನಲ್ಲಿ ವಿಮಾನ ತುರ್ತು ಭೂಸ್ಪರ್ಶವಾಗಿದ್ದು, ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ವಿಮಾನದಲ್ಲಿ ಇಬ್ಬರು ತರಬೇತಿ ಪೈಲಟ್‌ಗಳು ಇದ್ದರು ಎಂದು ತಿಳಿದುಬಂದಿದೆ.

ವಿಮಾನದಲ್ಲಿ ದಿಢೀರನೆ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಪೈಲಟ್‌ಗಳು ತಕ್ಷಣ ಕಾರ್ಯಪ್ರವೃತ್ತರಾಗಿ ತೊಗರಿ ಬಿತ್ತನೆ ಮಾಡಿದ್ದ ಜಮೀನಿನಲ್ಲೇ ವಿಮಾನವನ್ನು ಸುರಕ್ಷಿತವಾಗಿ ಇಳಿಸಿದ್ದಾರೆ ಎನ್ನಲಾಗಿದೆ.

ವಿಶ್ವವಿದ್ಯಾಲಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ವಿಷಯ ತಿಳಿಯುತ್ತಿದ್ದಂತೆ ಸ್ಥಳೀಯರು ಸ್ಥಳಕ್ಕೆ ಧಾವಿಸಿದ್ದಾರೆ.

ಕ್ರಾಸ್-ಕಂಟ್ರಿ ತರಬೇತಿ ಹಾರಾಟ ನಡೆಸುತ್ತಿದ್ದ ವೇಳೆ ತಾಂತ್ರಿಕ ದೋಷ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ರೆಡ್‌ಬರ್ಡ್ ಏವಿಯೇಷನ್ ಇಂಡಿಯಾದ 2006 ವಿಮಾನವನ್ನು ಬಯಲು ಪ್ರದೇಶದಲ್ಲಿ ಸುರಕ್ಷಿತವಾಗಿ ಇಳಿಸಲಾಗಿದೆ. ವಿಮಾನದಲ್ಲಿದ್ದ ತರಬೇತುದಾರ ಮತ್ತು ತರಬೇತುದಾರರು ಯಾವುದೇ ಗಾಯಗಳಿಲ್ಲದೆ ಸುರಕ್ಷಿತವಾಗಿದ್ದಾರೆ ಎಂದು ಸಂಸ್ಥೆ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದೆ.

ವಿಜಯಪುರದಲ್ಲೂ ವಿಮಾನ ಪತನವಾಗಿತ್ತು :

2026ರ ಫೆಬ್ರವರಿಯಲ್ಲಿ ನೆರೆಯ ವಿಜಯಪುರ ಜಿಲ್ಲೆಯ ಬಬಲೇಶ್ವರ ತಾಲೂಕಿನ ಮಂಗಳೂರು ಗ್ರಾಮದಲ್ಲಿ ಖಾಸಗಿ ಲಘು ವಿಮಾನವೊಂದು ಪತನಗೊಂಡಿತ್ತು. ಈ ವಿಮಾನದಲ್ಲಿದ್ದ ಇಬ್ಬರು ಪ್ರಯಾಣಿಕರು ಗಾಯಗೊಂಡಿದ್ದರು.

ಕಲಬುರಗಿಯಿಂದ ಬೆಳಗಾವಿಗೆ ತೆರಳುತ್ತಿದ್ದ ರೆಡ್ ಬರ್ಡ್ ಏವಿಯೇಷನ್ ಸಂಸ್ಥೆಗೆ ಸೇರಿದ ಸೆಸ್ನಾ 172 ಟ್ಯಾಂಗೋ ಚಾರ್ಲಿ ಹೆಸರಿನ ಖಾಸಗಿ ಲಘು ವಿಮಾನ ಇಂಧನ ಖಾಲಿಯಾದ ಹಿನ್ನೆಲೆಯಲ್ಲಿ ಜಮೀನಿನಲ್ಲಿ ಪತನಗೊಂಡಿತ್ತು ಎಂದು ವರದಿಯಾಗಿತ್ತು.

# ಜವಾಬ್ದಾರಿ, ಸನ್ಮಾನಗಳು ಬೆಳವಣಿಗೆಗೆ ಸ್ಫೂರ್ತಿ: ಕಾಶಿನಾಥ ಗುತ್ತೇದಾರ



ಚಿತ್ತಾಪುರ,ಅ.07-

ಜವಾಬ್ದಾರಿಗಳು ಹಾಗೂ ಸನ್ಮಾನಗಳು ಮನುಷ್ಯನ ಬೆಳವಣಿಗೆಗೆ ಸ್ಫೂರ್ತಿ ನೀಡಲಿವೆ ಎಂದು ನಾಗಾವಿ ಸಾಹಿತ್ಯ ಸಾಂಸ್ಕೃತಿಕ ಪರಿಷತ್ ಅಧ್ಯಕ್ಷ ಕಾಶಿನಾಥ ಗುತ್ತೇದಾರ ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿ ನಾಗಾವಿ ಸಾಹಿತ್ಯ ಸಾಂಸ್ಕೃತಿಕ ಪರಿಷತ್ ವತಿಯಿಂದ ಭಾನುವಾರ ಆಯೋಜಿಸಿದ್ದ ಅಭಿಮಾನದ ಸನ್ಮಾನ ಸಮಾರಂಭದಲ್ಲಿ ಪದವೀಧರ ಶಿಕ್ಷಕರ ಸಂಘದ ಅಧ್ಯಕ್ಷ ಸಂಗಣ್ಣಗೌಡ ನಾಲವಾರ, ಪಂಚ್ ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ಸುರೇಶ್ ಗುತ್ತೇದಾರ ಹಾಗೂ ಹಿರಿಯ ನಾಗರಿಕರ ಸಂಘದ ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತ ಮಹ್ಮದ್ ಇಬ್ರಾಹಿಂ ಅವರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಜವಾಬ್ದಾರಿಗಳು ಹಾಗೂ ಸನ್ಮಾನಗಳು ಎಲ್ಲರಿಗೂ ದೊರೆಯುವುದಿಲ್ಲ. ಅವು ಸಮರ್ಥರು ಹಾಗೂ ಅರ್ಹರಿಗೆ ಮಾತ್ರ ಸಿಗುತ್ತವೆ. ಸಮಾಜದಲ್ಲಿ ದೊರೆಯುವ ಸನ್ಮಾನಗಳು ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸುವುದರ ಜೊತೆಗೆ, ತಾವು ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರಗಳಲ್ಲಿ ಇನ್ನಷ್ಟು ಬೆಳವಣಿಗೆ ಸಾಧಿಸಲು ಪ್ರೇರಣೆ ನೀಡುತ್ತವೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿದ ಸಂಗಣ್ಣಗೌಡ ನಾಲವಾರ, ಸುರೇಶ್ ಗುತ್ತೇದಾರ ಕರದಾಳ ಹಾಗೂ ಮುಹಮ್ಮದ್ ಇಬ್ರಾಹಿಂ ಮಾತನಾಡಿದರು.

ಈ ಸಂದರ್ಭದಲ್ಲಿ ಶಾಂತಕುಮಾರ್ ಮಳಖೇಡ, ರಾಜಶೇಖರ್ ಬಳ್ಳಾ, ದೇವಪ್ಪ ನಂದೂರಕರ್ ಹಾಜಿಸಾಬ್ ಮುಲ್ಲಾ, ಜಗನ್ನಾಥ ಬಡಿಗೇರ, ವಿಜಯಕುಮಾರ್ ಭಂಕಲಗಿ, ವಿಠಲ್ ಕಟ್ಟಿಮನಿ, ರವಿಶಂಕರ್ ಬುರ್ಲಿ, ಸಂತೋಷ ಕಟ್ಟಿಮನಿ, ಪ್ರಕಾಶ್ ವಿಶ್ವಕರ್ಮ, ಚಂದ್ರು ಕಾಶಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ನರಸಪ್ಪ ಚಿನ್ನಕಟ್ಟಿ ನಿರೂಪಿಸಿ, ವಂದಿಸಿದರು.

# ಯುವಶಕ್ತಿಯಿಂದ ಪ್ರಜಾಪ್ರಭುತ್ವ ಮತ್ತಷ್ಟು ಬಲಗೊಳ್ಳಲಿ: ತಹಶೀಲ್ದಾರ್ ಶಿವಾನಂದ ಮೇತ್ರೆ

ಹುಲಸೂರು,ಅ.07-

ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯ ಮಹತ್ವ ಹಾಗೂ ಮೌಲ್ಯವನ್ನು ಇಂದಿನ ಯುವಕ-ಯುವತಿಯರು ಅರಿತುಕೊಳ್ಳಬೇಕು. ಯುವಶಕ್ತಿಯಿಂದ ಪ್ರಜಾಪ್ರಭುತ್ವ ಮತ್ತಷ್ಟು ಬಲಗೊಳ್ಳಬೇಕು ಎಂದು ತಹಶೀಲ್ದಾರ್ ಶಿವಾನಂದ ಮೇತ್ರೆ ಹೇಳಿದರು.

ಪಟ್ಟಣದ ಹೊರವಲಯದಲ್ಲಿರುವ ಎಂಕೆಕೆಪಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸೋಮವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ನಡೆದ ತಾಲೂಕು ಮಟ್ಟದ ಯುವ ಸಂಸತ್ ಅಣಕು ಪ್ರದರ್ಶನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಲೋಕಸಭೆ ಹಾಗೂ ವಿಧಾನಸಭೆಗಳ ಅಧಿವೇಶನಗಳು ಯಾವ ರೀತಿಯಲ್ಲಿ ನಡೆಯುತ್ತವೆ, ಕ್ಷೇತ್ರವನ್ನು ಪ್ರತಿನಿಧಿಸುವ ಸಚಿವರು, ಶಾಸಕರು ಹಾಗೂ ಸಂಸದರು ಜನರ ಸಮಸ್ಯೆಗಳ ಕುರಿತು ಹೇಗೆ ಪ್ರಶ್ನೆಗಳನ್ನು ಕೇಳುತ್ತಾರೆ ಎಂಬುದನ್ನು ಯುವಕರು ತಿಳಿದುಕೊಳ್ಳಬೇಕು. ಸರ್ಕಾರದ ವಿವಿಧ ಇಲಾಖೆಗಳ ಸವಾಲುಗಳಿಗೆ ಆಡಳಿತ ಪಕ್ಷದ ಸದಸ್ಯರು ಹೇಗೆ ಉತ್ತರಿಸುತ್ತಾರೆ ಹಾಗೂ ವಿರೋಧ ಪಕ್ಷದ ನಾಯಕರು ಯಾವ ರೀತಿಯ ಜವಾಬ್ದಾರಿ ನಿರ್ವಹಿಸುತ್ತಾರೆ ಎಂಬುದನ್ನು ಯುವ ಸಂಸತ್ ಅಣಕು ಪ್ರದರ್ಶನದ ಮೂಲಕ ಅರಿತುಕೊಳ್ಳಬಹುದು ಎಂದರು.


ಯುವ ಪದವೀಧರರು ತಮ್ಮ ಹಕ್ಕುಗಳ ಬಗ್ಗೆ ತಿಳಿದುಕೊಂಡು, ಸಮಾಜ ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಿ, ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಮಲ್ಲಿಕಾರ್ಜುನ್ ಕಾಂಬಳೆ ಮಾತನಾಡಿ, ರಾಜಕೀಯ ಕ್ಷೇತ್ರಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರಜ್ಞಾವಂತ, ಅಧ್ಯಯನಶೀಲ ಹಾಗೂ ಸಾಮಾಜಿಕ ಬದ್ಧತೆ ಹೊಂದಿರುವವರು ಬರಬೇಕು. ಆಗ ಮಾತ್ರ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತಷ್ಟು ಬಲಿಷ್ಠವಾಗಲು ಸಾಧ್ಯ ಎಂದು ಹೇಳಿದರು.

ಸಮಾಜ ಕಲ್ಯಾಣ ಇಲಾಖೆ ಬಸವಕಲ್ಯಾಣದ ಸಹಾಯಕ ನಿರ್ದೇಶಕ ದಿಲೀಪಕುಮಾರ್ ಉತ್ತಮ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಕಳೆದ ನಾಲ್ಕು ವರ್ಷಗಳಿಂದ ಹಲವು ಕಾರ್ಯಕ್ರಮಗಳನ್ನು ಆಯೋಜಿಸಿ ಯುವಕರಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು. ನಾಗಭೂಷಣ ಕೆ. ಸ್ವಾಗತಿಸಿದರು. ನಾಗರೆಡ್ಡಿ ನಿರೂಪಿಸಿದರು. ರಮೇಶ್ ಬಿರಾದಾರ ವಂದಿಸಿದರು. ಕುಮಾರಿ ಪ್ರಗತಿ ಸಭಾಧ್ಯಕ್ಷರಾಗಿ, ಸಂಗಮೇಶ ಮುಖ್ಯಮಂತ್ರಿಯಾಗಿ ಹಾಗೂ ಸುಮೀತ ವಿರೋಧ ಪಕ್ಷದ ನಾಯಕರಾಗಿ ಯುವ ಸಂಸತ್ ಅಣಕು ಪ್ರದರ್ಶನದಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ಪುಷ್ಪಾ ಕೋರೆ, ಎಂ.ಡಿ. ಶಕೀಲ್, ವಸತಿ ನಿಲಯ ಅಧಿಕಾರಿಗಳಾದ ನಿಂಗಣ್ಣಗೌಡ ಪಾಟೀಲ್, ಎಂ.ಡಿ. ಹಫೀಝ್, ಭೀಮಣ್ಣ ಮಾಶೆಟ್ಟಿ, ಉಜ್ವಲಾ ಪಾಟೀಲ್, ತಿಪ್ಪಣ್ಣ ಜಮಾದಾರ್ ಅನುರಾಧಾ ರೆಡ್ಡಿ, ದೇವಿಂದ್ರ ನಾಗಬತ್ತಿ ಹಾಗೂ ಅನಿಲ್ ಚೌಹಾನ್ ಸೇರಿದಂತೆ ಪದವಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಹುಲಸೂರ್ ಸೇತುವೆ ಕೆಳಗೆ ಉರುಳಿದ ಶಾಲಾ ಬಸ್: 20ಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಗಾಯ




ಹುಲಸೂರ್ ,ಅ.07-

ತಾಲ್ಲೂಕಿನ ಹಾಲಹಳ್ಳಿ ಗ್ರಾಮದ ಸಮೀಪ ಖಾಸಗಿ ಶಿಕ್ಷಣ ಸಂಸ್ಥೆಯೊಂದರ ಶಾಲಾ ಬಸ್ ಸಣ್ಣ ಸೇತುವೆ ಕೆಳಗೆ ಉರುಳಿದ್ದು, 20ಕ್ಕೂ ಹೆಚ್ಚು ವಿದ್ಯಾರ್ಥಿಗಳು ಗಾಯಗೊಂಡ ಘಟನೆ ಸೋಮವಾರ ನಡೆದಿದೆ.

ಹುಲಸೂರ್ ನ ಖಾಸಗಿ ಶಿಕ್ಷಣ ಸಂಸ್ಥೆಗೆ ಸೇರಿದ ಬಸ್‌ನಲ್ಲಿ ಸುಮಾರು 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದರು. ಬಸ್‌ನಲ್ಲಿ ಮಿತಿಮೀರಿದ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಕರೆದೊಯ್ಯಲಾಗುತ್ತಿತ್ತು. ಚಾಲಕನ ನಿರ್ಲಕ್ಷ್ಯದಿಂದಲೇ ಅಪಘಾತ ಸಂಭವಿಸಿದೆ ಎಂದು ಪಾಲಕರು ದೂರಿದ್ದಾರೆ.

ಬಸ್‌ನಲ್ಲಿ ಗೋರ್ಟಾ, ಮುಚಳಂಬ, ರಾಚಪ್ಪ ಗೌಡಗಾಂವ್, ಹಾಲಹಳ್ಳಿ, ಕೇಸರ ಜವಳಗಾ ಹಾಗೂ ತೊಗಲೂರು ಸೇರಿದಂತೆ ವಿವಿಧ ಗ್ರಾಮಗಳ ವಿದ್ಯಾರ್ಥಿಗಳು ಇದ್ದರು.

ಅಪಘಾತದ ಬಳಿಕ ಗಾಯಗೊಂಡ ವಿದ್ಯಾರ್ಥಿಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಯಿತು. ಸುಮಾರು 20ಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಗಾಯಗಳಾಗಿದ್ದು, ಕೆಲ ವಿದ್ಯಾರ್ಥಿಗಳನ್ನು ಹೆಚ್ಚಿನ ಚಿಕಿತ್ಸೆ ಗಾಗಿ ಪಾಲಕರು ನೀಲಂಗಾ, ಸೋಲಾಪುರ, ಉಮರ್ಗಾ, ಬೀದರ್ ಹಾಗೂ ಬಸವಕಲ್ಯಾಣದ ವಿವಿಧ ಆಸ್ಪತ್ರೆಗಳಿಗೆ ಕರೆದೊಯ್ದಿದ್ದಾರೆ ಎಂದು ತಿಳಿದು ಬಂದಿದೆ.

ಶಾಲಾ ವಾಹನಗಳ ಚಾಲಕರ ವರ್ತನೆ ಹಾಗೂ ವಾಹನ ಚಾಲನೆಯ ಕುರಿತು ಈ ಹಿಂದೆ ಹಲವು ಬಾರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಿಗೆ ದೂರು ನೀಡಿದ್ದರೂ ಯಾವುದೇ ಕ್ರಮ ಕೈಗೊಂಡಿರಲಿಲ್ಲ ಎಂದು ಪಾಲಕರು ಆರೋಪಿಸಿದ್ದಾರೆ. ಘಟನೆ ತಿಳಿದು ಶಾಸಕ ಶರಣು ಸಲಗರ ಸ್ಥಳಕ್ಕೆ ಭೇಟಿ ನೀಡಿ, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿದರು. ವೈದ್ಯಾಧಿಕಾರಿಗಳಿಂದ ಗಾಯಗೊಂಡ ಮಕ್ಕಳ ಆರೋಗ್ಯದ ಕುರಿತು ಮಾಹಿತಿ ಪಡೆದ ಅವರು, ಅಗತ್ಯವಿದ್ದ ಕೆಲ ವಿದ್ಯಾರ್ಥಿಗಳನ್ನು ಹೆಚ್ಚಿನ ಚಿಕಿತ್ಸೆ ಗಾಗಿ ಬಸವಕಲ್ಯಾಣ ಹಾಗೂ ಬೀದರ್‌ನ ಆಸ್ಪತ್ರೆಗಳಿಗೆ ಕಳುಹಿಸುವ ವ್ಯವಸ್ಥೆ ಮಾಡಿದರು.

ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಶಾಸಕ ಶರಣು ಸಲಗರ್, ಮಕ್ಕಳ ಆರೋಗ್ಯದ ಮೇಲೆ ಯಾವುದೇ ದುಷ್ಪರಿಣಾಮವಾಗದಂತೆ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸಂಪೂರ್ಣ ಜವಾಬ್ದಾರಿ ವಹಿಸಬೇಕು ಎಂದರು.

# ಸಾಮಾಜಿಕ ಮಾಧ್ಯಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳ ಬಗ್ಗೆ ಹಗುರವಾಗಿ ಮಾತನಾಡಿದ ಆರೋಪ : ಕ್ರಮಕ್ಕೆ ಆಗ್ರಹ



ಬೀದರ್,ಅ.07-

ಆರೋಗ್ಯ ಇಲಾಖೆಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಕುರಿತು ಸಾಮಾಜಿಕ ಮಾಧ್ಯಮಗಳ ಮುಂದೆ ಹಗುರವಾಗಿ ಮಾತನಾಡಿದ ಸಮುದಾಯ ಆರೋಗ್ಯ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಜಿಲ್ಲಾ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘ ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಸಂಘದ ವತಿಯಿಂದ ಮನವಿ ಸಲ್ಲಿಸಲಾಯಿತು.

ಈ ಕುರಿತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕರಿಗೆ ಸೋಮವಾರ ಸಲ್ಲಿಸಿದ ಮನವಿಯಲ್ಲಿ, ಅಖಿಲ ಕರ್ನಾಟಕ ರಾಜ್ಯ ಸಮುದಾಯ ಆರೋಗ್ಯ ಅಧಿಕಾರಿಗಳ ಕೇಂದ್ರ ಸಂಘದ ಕೆಲವರು ಸಾಮಾಜಿಕ ಮಾಧ್ಯಮಗಳ ಮುಂದೆ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಕುರಿತು ಹಗುರವಾಗಿ ಮಾತನಾಡಿದ್ದಾರೆ ಎಂದು ಆರೋಪಿಸಲಾಗಿದೆ. ಸಂಬಂಧಪಟ್ಟವರನ್ನು ಸೇವೆಯಿಂದ ವಜಾಗೊಳಿಸಬೇಕು. ಅಲ್ಲದೆ, ಸಮುದಾಯ ಆರೋಗ್ಯ ಅಧಿಕಾರಿಗಳ ಸಂಘವು ಮಾಧ್ಯಮಗಳ ಎದುರು ಬಹಿರಂಗವಾಗಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಲಾಗಿದೆ.

ಈ ಕುರಿತು ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಸಂಬಂಧಪಟ್ಟವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಲಾಗಿದೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಸುನಿಲ್ ಕಸ್ತೂರೆ, ಪ್ರಧಾನ ಕಾರ್ಯದರ್ಶಿ ವಿವೇಕ್ ಸ್ವಾಮಿ, ಖಜಾಂಚಿ ಅಲಿಮೋದ್ದಿನ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷೆ ಶಕುಂತಲಾ ದಂಡೆ, ಪ್ರಧಾನ ಕಾರ್ಯದರ್ಶಿ ವಿಜಯಲಕ್ಷ್ಮೀ ಧಮಲಾ, ಖಜಾಂಚಿ ಜರೀನಾ ಬೇಗಂ, ಪಾರ್ವತಿ ಸೊನಾರೆ, ಬಸಮ್ಮ, ರೇಣುಕಾ, ಸುಲೋಚನಾ, ವಿಲ್ಸನ್ ಸಾಲೋಮನ್, ವಿದ್ಯಾಸಾಗರ್, ಸಂಗಮೇಶ್ ರೆಡ್ಡಿ, ಶಿವಪ್ಪ ಗುಮ್ಮಾ ಭೂಷಣ, ವೀರಶೆಟ್ಟಿ ಚನ್ನಶೆಟ್ಟಿ, ಶಿವಾನಂದ್ ಸ್ವಾಮಿ, ಜಾವೇದ್, ರಫಿಯೋದ್ದಿನ್, ವಿಲ್ಸನ್, ಕೇದಾರನಾಥ್, ವಹೀದ್ ಪರ್ವೇಜ್ ಹಾಗೂ ಸಂಗಮೇಶ್ ಕುಡ್ಲೇ ಸೇರಿದಂತೆ ಸಂಘದ ಪದಾ ಧಿಕಾರಿಗಳು ಹಾಗೂ ಜಿಲ್ಲೆಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಉಪಸ್ಥಿತರಿದ್ದರು.




# ಅ.24, 25ರಂದು 25ನೇ ಕಲ್ಯಾಣ ಪರ್ವ ರಜತ ಮಹೋತ್ಸವ : ಡಾ.ಚನ್ನಬಸವಾನಂದ ಸ್ವಾಮೀಜಿ

ಬೀದರ್,ಅ.07-

ಬಸವ ಧರ್ಮ ಪೀಠದ ಸ್ವಾಭಿಮಾನಿ ಹಾಗೂ ತತ್ವನಿಷ್ಠ ಶರಣರಿಂದ ಅ.24 ಮತ್ತು 25ರಂದು 25ನೇ ಕಲ್ಯಾಣ ಪರ್ವ ರಜತ ಮಹೋತ್ಸವ ಆಯೋಜಿಸಲಾಗಿದೆ ಎಂದು ಬೆಂಗಳೂರಿನ ಚನ್ನಬಸವೇಶ್ವರ ಜ್ಞಾನಪೀಠದ ಅಧ್ಯಕ್ಷ ಡಾ. ಚನ್ನಬಸವಾನಂದ ಸ್ವಾಮೀಜಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೀದರ್ ಜಿಲ್ಲಾ ರಾಷ್ಟ್ರೀಯ ಬಸವದಳ, ಲಿಂಗಾಯತ ಧರ್ಮ ಮಹಾಸಭಾ ಹಾಗೂ ಕ್ರಾಂತಿ ಗಂಗೋತ್ರಿ ಮಹಿಳಾ ಗಣದ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

2002ರಲ್ಲಿ ಬಸವಧರ್ಮ ಪೀಠಾಧ್ಯಕ್ಷೆ ಮಾತೆ ಮಹಾದೇವಿ ಅವರ ನೇತೃತ್ವದಲ್ಲಿ ಆರಂಭವಾದ ಕಲ್ಯಾಣ ಪರ್ವ ಇದೀಗ 25ನೇ ವರ್ಷಕ್ಕೆ ಕಾಲಿಟ್ಟಿದೆ. ಮಾತೆ ಮಹಾದೇವಿ ಅವರ ಆಶಯದಂತೆ ಕಾರ್ಯನಿರ್ವಹಿಸುತ್ತಿರುವ ರಾಷ್ಟ್ರೀಯ ಬಸವದಳದ 25 ಶಾಖೆಗಳನ್ನು ಆಯ್ಕೆ ಮಾಡಿ ಅತ್ಯುತ್ತಮ ರಾಷ್ಟ್ರೀಯ ಬಸವದಳ ಪ್ರಶಸ್ತಿ ನೀಡಲಾಗುವುದು. ಲಿಂಗಾನಂದ ಅಪ್ಪಾಜಿ ಅವರ ಸ್ಮರಣಾರ್ಥ ಗೌರವ ಪುರಸ್ಕಾರವನ್ನೂ ಪ್ರದಾನ ಮಾಡಲಾಗುವುದು ಎಂದು ಹೇಳಿದರು. ಬಸವ ತತ್ವವನ್ನು ಅನುಸರಿಸುತ್ತಿರುವ 25 ಜೋಡಿ ದಂಪತಿಗಳಿಗೆ ಆದರ್ಶ ಶರಣ ದಂಪತಿಗಳು ಪ್ರಶಸ್ತಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿರುವ 25 ಸಾಧಕರಿಗೆ ಗೌರವ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಕ್ರಾಂತಿ ಗಂಗೋತ್ರಿ ಮಹಿಳಾ ಗಣದ ರಾಷ್ಟ್ರೀಯ ಅಧ್ಯಕ್ಷೆ ಸತ್ಯಾದೇವಿ ಮಾತೆ ಮಾತನಾಡಿ, ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ ಸೇರಿದಂತೆ ವಿವಿಧ ರಾಜ್ಯಗಳು ಹಾಗೂ ಕರ್ನಾಟಕದ ಎಲ್ಲ ಜಿಲ್ಲೆಗಳಿಂದ 10 ಸಾವಿರಕ್ಕೂ ಅಧಿಕ ಬಸವ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಆಗಮಿಸುವ ಭಕ್ತರಿಗೆ ಪ್ರಸಾದ ಹಾಗೂ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಮಾಹಿತಿ ನೀಡಿದರು.

ಅ.24ರಂದು ಬೆಳಿಗ್ಗೆ 6 ಗಂಟೆಗೆ ಸಾಮೂಹಿಕ ಇಷ್ಟಲಿಂಗ ಪೂಜೆ, 7 ಗಂಟೆಗೆ ವೇದಿಕೆ ದೈವೀಕರಣ ಹಾಗೂ ಬಸವೇಶ್ವರ ಪೂಜಾವ್ರತ ನಡೆಯಲಿದೆ. ಬೆಳಿಗ್ಗೆ 11 ಗಂಟೆಗೆ ಕಲ್ಯಾಣ ಪರ್ವದ ರಜತ ಮಹೋತ್ಸವದ ಉದ್ಘಾಟನಾ ಸಮಾರಂಭ ಹಾಗೂ ಲಿಂಗಾಯತ ಧರ್ಮದ ಮಾನ್ಯತೆ ಹೋರಾಟ ಕುರಿತು ಚಿಂತನಗೋಷ್ಠಿ ನಡೆಯಲಿದೆ. ಅ.25ರಂದು ಪ್ರಶಸ್ತಿ ಪ್ರದಾನ, ಸಾಧಕರಿಗೆ ಸನ್ಮಾನ, ಪಥಸಂಚಲನ, ಭವ್ಯ ಮೆರವಣಿಗೆ ಹಾಗೂ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಆಯೋಜಕರು ತಿಳಿಸಿದರು. ಈ ಸಂದರ್ಭದಲ್ಲಿ ಶಿವರಾಜ್ ಪಾಟೀಲ್ ಅತಿವಾಳ್, ಶಿವಶರಣಪ್ಪ ಪಾಟೀಲ್ ಹಾರೂರಗೇರಿ, ಮಲ್ಲಿಕಾರ್ಜುನ ಶಾಪೂರ್ ಮಲ್ಲಿಕಾರ್ಜುನ ಬುಕ್ಕಾ, ಬಸವರಾಜ ಸಂಗಮದ, ವಿಶ್ವನಾಥ್ ಪಾಟೀಲ್ ಗೊಂದೆಗಾಂವ್, ರವಿಕಾಂತ್ ಬಿರಾದಾರ್ ಸರಸ್ವತಿ ಶಟಕಾರ್ ಹಾಗೂ ಮನ್ಮಥಯ್ಯ ಸ್ವಾಮಿ ಸೇರಿದಂತೆ ಹಲವರು ಇದ್ದರು.

## ಒಂದನೇಯ ಪುಟದಿಂದ

# ಮಾಧ್ಯಮಗಳ ಮುಂದೆ ಹಗುರವಾಗಿ ಮಾತನಾಡಿದ ಸಮುದಾಯ ಆರೋಗ್ಯ ಅಧಿಕಾರಿಗಳನ್ನು ವಜಾಗೊಳಿಸಿ

ಣ ಇಲಾಖೆಯ ಅಧಿಕಾರಿಗಳಾದ ಡಾ ನಂದಿತಾ ಎಂ ಎನ್ ಗೆ ಮನವಿ ಪತ್ರ ನೀಡಲಾಯಿತು ಹಾಗೂ ನಿರ್ದೇಶಕರು ಆರೋ ಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೆಂಗಳೂರು ಇವರಿಗೆ ಸದರಿ ವಿಷಯದ ಕುರಿತು ಮನ ವಿ ಪತ್ರ ನೀಡಬೇಕೆಂದು ಮನವಿ ಮಾಡಲಾಯಿತು. ಈ ಸಂದರ್ಭ ದಲ್ಲಿ ಜಿಲ್ಲಾಧ್ಯಕ್ಷರಾದ ಯಲ್ಲಾ ಲಿಂಗ ಎಸ್ ವಿ ಚಿಂತನಹಳ್ಳಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಳಾದ ಪ್ರವೀಣ್ ಕುಮಾರ್ ಜಿಲ್ಲಾಉಪಾಧ್ಯಕ್ಷರಾದ ಭೀಮ ಶಂಕರ ಸೇರಿದಂತೆ ಪದಾಧಿಕಾ ರಿಗಳು ಮತ್ತು ಆರೋಗ್ಯ ನಿರೀಕ್ಷ ಣಾಧಿಕಾರಿಗಳು,ಇತರರು ಉಪ ಸ್ಥಿತರಿದ್ದರು

# ರೈತರಿಗೆ ಪ್ರತಿ ಎಕರೆಗೆ ₹25 ಸಾವಿರ ಪರಿಹಾರ ನೀಡುವಂತೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಹೋರಾಟ

ನಾರಾಯಣಪುರ ಬಲದಂಡೆ ಕಾಲುವೆಯ 95ರಿಂದ 168 ಕಿ.ಮೀ.ವರೆಗೆ ನೀರು ಹರಿಸಬೇಕು. ಜಿಲ್ಲೆಯ ಎಲ್ಲ ಕೆರೆಗಳನ್ನು ತುಂಬಿಸಬೇಕು. ರಾಯಚೂರು ಗ್ರಾಮೀಣ ಕ್ಷೇತ್ರದ ಮಟಮಾರಿ ಏತ ನೀರಾವರಿ ಯೋಜನೆಯ ಕಾಮಗಾರಿ ತಕ್ಷಣ ಆರಂಭಿಸಬೇಕು. ತುಂಗಭದ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ರಾಜಲಬಂಡಾ ಆಣೆಕಟ್ಟಿನಿಂದ ಆರ್‌ಡಿಸಿ ಕಾಲುವೆಗೆ ನೀರು ಹರಿಸಬೇಕು ಎಂದು ಒತ್ತಾಯಿಸಿದರು.

ರೈತರು ಪಾವತಿಸಿರುವ ಬೆಳೆ ವಿಮೆಗೆ ಸೂಕ್ತ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು. ಹಿಂಗಾರು ಬೆಳೆ ಬೆಳೆಯಲು ವಿಶೇಷ ಪ್ಯಾಕೇಜ್ ಘೋಷಿಸಬೇಕು. ರಸಗೊಬ್ಬರ ಪಡೆಯಲು ಕಡ್ಡಾಯಗೊಳಿಸಿರುವ ಎಫ್‌ಐಡಿ ನಿಯಮವನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಸಲು ಸಂಬಂಧಿಸಿದ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಹೊಲಗಳಲ್ಲಿರುವ ಬೋರ್‌ವೆಲ್‌ಗಳಿಗೆ ಆರ್‌ಆರ್ ನಂಬರ್ ನೀಡಲು ನಿಗದಿಪಡಿಸಿರುವ ₹45 ಸಾವಿರ ಶುಲ್ಕ ರದ್ದುಪಡಿಸಿ ಉಚಿತವಾಗಿ ಆರ್‌ಆರ್ ನಂಬರ್ ನೀಡಬೇಕು. ರೈತರಿಗೆ ಟ್ರಾನ್ಸ್ ಫಾರ್ಮರ್‌ಗಳನ್ನು ಉಚಿತವಾಗಿ ಒದಗಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಹತ್ತಿಗೆ ಕೇಂದ್ರ ಸರ್ಕಾರ ಪ್ರತಿ ಕ್ವಿಂಟಲ್‌ಗೆ ₹12 ಸಾವಿರ ಬೆಂಬಲ ಬೆಲೆ ನಿಗದಿಪಡಿಸಬೇಕು. ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಿರುವ ಜೋಳದ ಹಣ ಪಾವತಿಯಾಗದ ರೈತರಿಗೆ ಕೂಡಲೇ ಹಣ ಬಿಡುಗಡೆ ಮಾಡಬೇಕು. ಹತ್ತಿ ಮಾರಾಟದ ವೇಳೆ ಲೋಡಿಂಗ್, ಅನ್‌ಲೋಡಿಂಗ್ ವೆಚ್ಚವನ್ನು ರೈತರಿಂದ ವಸೂಲಿ ಮಾಡುವುದನ್ನು ಹಾಗೂ ಪ್ರತಿ ಕ್ವಿಂಟಲ್‌ಗೆ 2 ಕೆ.ಜಿ. ಸ್ಕೂಟ್ ತೆಗೆಯುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಧ್ಯಕ್ಷ ಕೆ. ವಿರೇಶ್ ಗೌಡ,ಬಾಪುರು ತಿಮ್ಮಪ್ಪ,ರಾಳದೊಡ್ಡಿ ನರಸಪ್ಪ,ಮೆಹಬೂಬ್ ನೆಲಹಾಳ್, ಚಂದಾಸಾಬ್,ಕಾಸಿಂ ಮಮದಪುರ,ಇಬ್ರಾಹಿಂ, ದೇವಪ್ಪ ಸೇರಿದಂತೆ ರೈತ ಮುಖಂಡರು ಇದ್ದರು.

# ಬಾಲಕಿಯರ ವಸತಿ ನಿಲಯ ಗಬ್ಬೂರು ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸುವಂತೆ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳಿಗೆ ಮನವಿ

ಕಟ್ಟಡವನ್ನು ಬಾಡಿಗೆಗೆ ಪಡೆದುಕೊಂಡು ವಿದ್ಯಾರ್ಥಿನಿಯರನ್ನು ಸ್ಥಳಾಂತರಿಸಿ ವಿದ್ಯಾರ್ಥಿನಿಯರ ಮುಂದಿನ ವಿದ್ಯಾಬ್ಯಾಸಕ್ಕೆ ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಸಂಘಟನೆಯು ಇಂದು ಒತ್ತಾಯ ಮಾಡಿತು ಒಂದು ವೇಳೆ ನಿರ್ಲಕ್ಷಿಸಿದರೆ ಸಂಘಟನೆಯ ವತಿಯಿಂದ ವಿದ್ಯಾರ್ಥಿನಿಯರ ಪಾಲಕರೋದಿಗೆ ಹೋರಾಟ ಮಾಡಬೇಕಾಗುತ್ತದೆ . ಎಂದು ಸಂಘಟನೆಯ ಮುಖಂಡರು ಎಚ್ಚರಿಕೆ ನೀಡಿದರು ಈ ಸಂದರ್ಭದಲ್ಲಿ ಬಸವರಾಜ್ ಜಗ್ಲಿ ಗಬ್ಬೂರ್ ಮಲ್ಲಿಕಾರ್ಜುನ್ ಸಿಂಗ್ರಿ ಗಬ್ಬೂರು ಮುರಾರಿ .ಗಣೇಕಲ್ ಶಿವರಾಜ್ ಯಾದವ್ ಗಬ್ಬೂರ್ ಆಂಜನೇಯ ಚಲವಾದಿ ಗಬ್ಬೂರ್ ಮುಂತಾದ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

# ಸಮಾಜ ಸೇವೆ, ಸಂಘಟನೆ ಹಾಗೂ ಯುವಶಕ್ತಿಗೆ ಮತ್ತಷ್ಟು ಬಲ: ಶಿವರಾಜಗೌಡ ಬಸವರಾಜ ಅವರಿಗೆ ಮಹತ್ವದ ಜವಾಬ್ದಾರಿ

ರಾಯಚೂರು ಜಿಲ್ಲಾ ಯುವ ವಿಭಾಗಕ್ಕೆ ಹೊಸ ಚೈತನ್ಯ ತುಂಬುವ ಮೂಲಕ, ಸಂಘಟನೆಯನ್ನು ಇನ್ನಷ್ಟು ಬಲಿಷ್ಠಗೊಳಿಸಿ ಸಮಾಜದ ಸೇವೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಲಿ ಎಂಬ ಆಶಯದೊಂದಿಗೆ ಶಿವರಾಜಗೌಡ ಅವರಿಗೆ ಶುಭ ಹಾರೈಸಲಾಗಿದೆ.

# ಬರ ಪರಿಸ್ಥಿತಿ, ಕುಡಿಯುವ ನೀರಿನ ಸಮಸ್ಯೆ, ಮೇವಿನ ಲಭ್ಯತೆ, ನೀರಾವರಿ ಸಮಸ್ಯೆ, ಕುರಿತು ಅಧಿಕಾರಿಗಳೊಂದಿಗೆ ಸಭೆ

ಬೇಕು, ಬರಗಾಲದ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದತೆ ಮುನ್ನೆಚ್ಚರಿಕೆ ವಹಿಸಿ, ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರು ಸೂಚನೆ ನೀಡಿದರು.

ಶ್ರೀಘ್ರ ಐಸಿಸಿ ಸಭೆ ಆಯೋಜನೆ: ಬರಗಾಲದ ಹಿನ್ನಯಲ್ಲಿ ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ರೈತರಿಗೆ ಸಮರ್ಪಕ ನೀರು ಒದಗಿಸುವ ಕುರಿತು ಚರ್ಚಿಸಲು ಮತ್ತು ಎಲ್ಲರೊಂದಿಗೆ ಸಮಾಲೋಚನೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲು ಕೂಡಲೇ ಐಸಿಸಿ ಸಭೆಯನ್ನು ಕರೆಯುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಐಸಿಸಿ ಸಮಿತಿಯ ಅಧ್ಯಕ್ಷರಾದ ಶಿವರಾಜ ತಂಡಗಿ ಅವರಿಗೆ ಪತ್ರ ಬರೆಯುವ ಮೂಲಕ ಶ್ರೀಘ್ರವೇ ಐಸಿಸಿ ಸಭೆಯನ್ನು ಆಯೋಜನೆ ಮಾಡುವಂತೆ ತಿಳಿಸಲಾಗುವುದು ಎಂದು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್ ಅವರು ತಿಳಿಸಿದರು.

ಕುಡಿಯುವ ನೀರಿಗೆ ಪ್ರಥಮ ಆದ್ಯತೆ: ಸರ್ಕಾರ ಹಾಗೂ ಮುಖ್ಯಮಂತ್ರಿಗಳ ಸ್ಪಷ್ಟ ನಿರ್ದೇಶನದಂತೆ ಈ ಬರಗಾಲದ ಸಂದರ್ಭದಲ್ಲಿ ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕಿದೆ. ನವೆಂಬರ್ 10ರ ಗಡುಳಿನೊಳಗೆ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಸುಧಾರಿಸದಿದ್ದರೆ ಎದುರಾಗುವ ಸವಾಲುಗಳನ್ನು ಗಂಭೀರವಾಗಿ ಪರಿಗಣಿಸಬೇಕಾಗುತ್ತದೆ. ರಾಯಚೂರು ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ನಿಗದಿತ ಅಡಿಗಳವರೆಗೆ ನೀರು ಲಭ್ಯವಿರಬೇಕಿದೆ. ನೀರಾವರಿ ಇಲಾಖೆಯು ಬಿಡುಗಡೆ ಮಾಡುವ ನೀರಿನ ಪ್ರಮಾಣಕ್ಕೂ ಮತ್ತು ವಾಸ್ತವವಾಗಿ ಆಗಬೇಕಿರುವ ಅಗತ್ಯತೆಗೂ ಸಮನ್ವಯತೆ ಇರಬೇಕು. ಜಿಲ್ಲಾಡಳಿತ, ಪೊಲೀಸ್ ಇಲಾಖೆ, ನೀರಾವರಿ ಇಲಾಖೆ ಹಾಗೂ ಆಡಳಿತ ಮತ್ತು ವಿರೋಧ ಪಕ್ಷದ ಎಲ್ಲ ಜನಪ್ರತಿನಿಧಿಗಳು ಒಟ್ಟಾಗಿ ಈ ಬರಗಾಲವನ್ನು ಸಮರ್ಥವಾಗಿ ಎದುರಿಸಲು ಕೈಜೋಡಿಸಬೇಕಿದೆ. ಜಿಲ್ಲೆಯಾದ್ಯಂತ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ಆಡಳಿತ ಯಂತ್ರವು ಸಜ್ಜಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರು.

ಈ ವೇಳೆ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ರೈತರ ಬೋರ್‌ವೆಲ್‌ಗಳು ಬತ್ತಿಹೋಗುತ್ತಿವೆ. ಟ್ಯಾಂಕರ್ ಮೂಲಕ ನೀರು ಪೂರೈಸಬೇಕಾದ ಪರಿಸ್ಥಿತಿ ಎದುರಾಗುವ ಸಾಧ್ಯತೆ ಇದೆ. ಆದ್ದರಿಂದ ಕ್ರಿಟಿಕಲ್ ಗ್ರಾಮಗಳನ್ನು ಗುರುತಿಸಿ ಪಟ್ಟಿ ಮಾಡಬೇಕು. ಮೊದಲೇ ಪಟ್ಟಿ ಸಿದ್ಧಪಡಿಸಿದರೆ ಸಮರ್ಪಕವಾಗಿ ನೀರು ಪೂರೈಸಲು ಸಾಧ್ಯವಾಗುತ್ತದೆ. ಬೋರ್‌ವೆಲ್ ಹಾಗೂ ಟ್ಯಾಂಕರ್‌ಗಳನ್ನು ಬಾಡಿಗೆಗೆ ಪಡೆಯಲು ಈಗಿನಿಂದಲೇ ಕ್ರಮ ಕೈಗೊಳ್ಳಬೇಕು ಎಂದರು.

ಈ ವೇಳೆ ರಾಯಚೂರು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ್ ಎಸ್.ಪಾಟೀಲ್ ಅವರು ಮಾತನಾಡಿ, ಡ್ಯಾಂ ಗೇಟ್ ತೆರೆದು ಎಷ್ಟು ದಿನಗಳಾಗಿವೆ. 104 ಮೈಲ್‌ಗೆ ಎಷ್ಟು ನೀರು ನೀಡಲಾಗಿದೆ. ಹಾಗೂ 69 ಮೈಲ್‌ಗೆ ಎಷ್ಟು ನೀರು ಹರಿಸಲಾಗಿದೆ ಎಂಬ ಮಾಹಿತಿಯನ್ನು ನೀಡುವಂತೆ ಸಂಬಧಿಸಿದ ಇಲಾಖೆಯ ಅಧಿಕಾರಿಗಳನ್ನು ಪ್ರಶ್ನಿಸಿದರು.

ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ ಅವರು ಮಾತನಾಡಿ, ಮುಂದಿನ ಕ್ರಿಯಾಯೋಜನೆ ರೂಪಿಸುವಾಗ ಪಂಚಾಯತಿವಾರು ಸಮಸ್ಯೆಗಳ ಪಟ್ಟಿಯನ್ನು ಸಿದ್ದಪಡಿಸಬೇಕು. ಪ್ರತಿ ಗ್ರಾಮದಲ್ಲಿ ಜನಸಂಖ್ಯೆ ಎಷ್ಟು, ಎಷ್ಟು ಪ್ರಮಾಣದ ನೀರು ಅಗತ್ಯವಿದೆ ಹಾಗೂ ಎಷ್ಟು ಬೋರ್‌ವೆಲ್‌ಗಳ ಅವಶ್ಯಕತೆ ಇದೆ ಎಂಬುದರ ಕುರಿತು ಸಮಗ್ರ ಮಾಹಿತಿ ಪಡೆಯಬೇಕು. ಕುಡಿಯುವ ನೀರಿನ ಯೋಜನೆಗೆ ಸಂಬಧಿಸಿದ ಅಧಿಕಾರಿಗಳು ಏನು ಕ್ರಮ ಕೈಗೊಂಡಿದ್ದಾರೆ ಎಂಬುದನ್ನು ತಿಳಿಸಬೇಕೆಂದು ಹೇಳಿದರು.

ಮಸ್ಕಿ ಶಾಸಕ ಬಸನಗೌಡ ತುರವಿಹಾಳ್ ಮಾತನಾಡಿ, ಕಳೆದ ಒಂದು ವರ್ಷದಿಂದ ಜಲಮೂಲ ಇಲ್ಲ ಎಂದು ಹೇಳಲಾಗುತ್ತಿದೆ. ಬಾಡಿಗೆ ಬೋರ್‌ವೆಲ್ ಮೂಲಕ ನೀರು ನೀಡಲಾಗುತ್ತಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದರೂ ವಾಸ್ತವ ಸ್ಥಿತಿ ಬೇರೆ ಇದೆ ಎಂದು ಆರೋಪಿಸಿದರು.

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ ಅವರು ಮಾತನಾಡಿ, ಮಸ್ಕಿ ಶಾಸಕ ಬಸನಗೌಡ ತುರವಿಹಾಳ್ ಮಾತನಾಡಿ, ಕಳೆದ ಒಂದು ವರ್ಷದಿಂದ ಜಲಮೂಲ ಇಲ್ಲ ಎಂದು ಹೇಳಲಾಗುತ್ತಿದೆ. ಬಾಡಿಗೆ ಬೋರ್‌ವೆಲ್ ಮೂಲಕ ನೀರು ನೀಡಲಾಗುತ್ತಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದರೂ ವಾಸ್ತವ ಸ್ಥಿತಿ ಬೇರೆ ಇದೆ ಎಂದರು.

ಇದೇ ಸಂದರ್ಭದಲ್ಲಿ ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಎನ್.ಎಸ್.ಬೋಸರಾಜು, ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುಮ್ಮಾ, ಡಾ.ಹಂಪಣ್ಣ ಸಜ್ಜನ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ತಾಲೂಕಿನ ತಹಶೀಲ್ದಾರರು, ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು

# ಸರಕಾರಿ ನೌಕರರು ಆರೋಗ್ಯ ನಿರ್ಲಕ್ಷಿಸಬಾರದು : ಡಿಸಿ ಶಿಲ್ಪಾ ಶರ್ಮಾ




ಬೀದರ್,ಅ.07-

ಸರ್ಕಾರಿ ನೌಕರರು ಸಾರ್ವಜನಿಕರ ಸೇವೆಗಾಗಿ ಹಗಲಿರುಳು ಶ್ರಮಿಸುತ್ತಾರೆ. ಆದರೆ, ಕೆಲಸದ ಒತ್ತಡದ ನಡುವೆ ತಮ್ಮ ಸ್ವಂತ ಆರೋಗ್ಯವನ್ನು ನಿರ್ಲಕ್ಷಿಸಬಾರದು. ದೈಹಿಕವಾಗಿ ಮತ್ತು ಮಾನಸಿಕವಾಗಿ ಸದೃಢರಾದ ಅಧಿಕಾರಿಗಳಿಂದ ಮಾತ್ರ ಜನತೆಗೆ ಉತ್ತಮ ಹಾಗೂ ತ್ವರಿತ ಸೇವೆ ಒದಗಿಸಲು ಸಾಧ್ಯ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಮತ್ತು ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರ್ಕಾರಿ ನೌಕರರ ಆರೋಗ್ಯದ ಹಿತದೃಷ್ಟಿಯಿಂದ ಉತ್ತಮ ಹಾಗೂ ಅರ್ಥಪೂರ್ಣ ಕಾರ್ಯಕ್ರಮ ಆಯೋಜಿಸಿರುವ ಜಿಲ್ಲಾ ಪಂಚಾಯಿತಿ ಸಿಇಒ ಹಾಗೂ ಆರೋಗ್ಯ ಇಲಾಖೆಯ ಕಾರ್ಯವನ್ನು ಶ್ಲಾಘಿಸಿದ ಅವರು, ಎಲ್ಲ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಯಾವುದೇ ಹಿಂಜರಿಕೆಯಿಲ್ಲದೆ ಶಿಬಿರದ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯಿತಿ ಸಿಇಒ ಗಿತ್ತೆ ಮಾಧವ್ ವಿಠ್ಠಲರಾವ್ ಮಾತನಾಡಿ, ದಿನನಿತ್ಯದ ಕಚೇರಿ ಕೆಲಸದ ಒತ್ತಡ, ಬದಲಾದ ಆಹಾರ ಪದ್ಧತಿ ಹಾಗೂ ದೈಹಿಕ ಶ್ರಮದ ಕೊರತೆಯಿಂದಾಗಿ ಇಂದು ಜನರಲ್ಲಿ ರಕ್ತದೊತ್ತಡ (ಬಿಪಿ) ಹಾಗೂ ಮಧುಮೇಹ (ಶುಗರ್) ದಂತಹ ಗಂಭೀರ ಕಾಯಿಲೆಗಳು ಹೆಚ್ಚಿನ ಪ್ರಮಾಣದಲ್ಲಿ ಕಾಣಿಸಿಕೊಳ್ಳುತ್ತಿವೆ. ರೋಗ ಉಲ್ಬಣಿಸಿದ ಬಳಿಕ ಆಸ್ಪತ್ರೆಗೆ ಅಲೆಯುವ ಬದಲು, ರೋಗ ಬರದಂತೆ ಮುನ್ನೆಚ್ಚರಿಕೆ ವಹಿಸುವುದು ಜಾಣತನವಾಗಿದೆ ಎಂದು ತಿಳಿಸಿದರು.

ಯಾವುದೇ ರೋಗ ಲಕ್ಷಣಗಳಿಲ್ಲದಿದ್ದರೂ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದರಿಂದ ಸಂಭವನೀಯ ಅಪಾಯಗಳನ್ನು ತಡೆಯಬಹುದು ಎಂದು ಅವರು ಕಿವಿಮಾತು ಹೇಳಿದರು.

ಸರ್ಕಾರಿ ನೌಕರರು ಸಾರ್ವಜನಿಕರ ಸೇವೆಗಾಗಿ ಶ್ರಮಿಸುತ್ತಾ ತಮ್ಮ ಸ್ವಂತ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸುವುದು ಸಾಮಾನ್ಯವಾಗಿದೆ. ಇದನ್ನು ಮನಗಂಡು ಈ ವಿಶೇಷ ಶಿಬಿರವನ್ನು ಆಯೋಜಿಸಲಾಗಿದೆ. ಬೀದರ್ ತಾಲೂಕು ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಯಾವುದೇ ನೆಪ ಹೇಳದೆ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಪಾಲ್ಗೊಳ್ಳಬೇಕು. ಕಡ್ಡಾಯವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಅಗತ್ಯವಿರುವವರು ವೈದ್ಯರು ಸೂಚಿಸುವ ಸೂಕ್ತ ಚಿಕಿತ್ಸೆ ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಪಾಲಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಕ್ತದಾನವು ಜೀವದಾನವಿದ್ದಂತೆ. ನಾವು ನೀಡುವ ರಕ್ತವು ತುರ್ತು ಸಂದರ್ಭದಲ್ಲಿ ಮತ್ತೊಬ್ಬರ ಪ್ರಾಣ ಉಳಿಸಲು ಸಹಕಾರಿಯಾಗುತ್ತದೆ. ಹೀಗಾಗಿ ಶಿಬಿರದಲ್ಲಿ ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಲು ಇಚ್ಛಿಸುವವರು ತಮ್ಮ ಹೆಸರನ್ನು ನೋಂದಾಯಿಸಿಕೊಂಡು ರಕ್ತದಾನ ಮಾಡುವ ಮೂಲಕ ಈ ಪುಣ್ಯ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಕಚೇರಿಯ ಎಲ್ಲ ಶಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ, ಜಿಲ್ಲೆಯ ಎಲ್ಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವೈದ್ಯಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.



# ವಿದ್ಯಾರ್ಥಿಗಳಿಗೆ ವಿದ್ಯೆಯೊಂದಿಗೆ ಸಂಸ್ಕಾರವೂ ಮುಖ್ಯ: ಶಾಸಕ ಬಿ.ಆರ್.ಪಾಟೀಲ್

ಕಲಬುರಗಿ,ಅ.07-

ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಸಂಸ್ಕಾರವನ್ನು ಕಲಿಯುವುದು ಬಹಳ ಮುಖ್ಯ ಎಂದು ಆಳಂದ ಮತಕ್ಷೇತ್ರದ ಶಾಸಕ ಬಿ.ಆರ್. ಪಾಟೀಲ್ ಹೇಳಿದರು.

ನಗರದ ಶರಣಬಸವೇಶ್ವರ ಕಲಾ ಪದವಿ ಮಹಾವಿದ್ಯಾಲಯದಲ್ಲಿ ಮಂಗಳವಾರ ವಿದ್ಯಾರ್ಥಿ ಕಲಾನಿಕಾಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ವಿದ್ಯಾರ್ಥಿಯೂ ಶಿಸ್ತು, ಶ್ರಮ ಹಾಗೂ ಸಂಸ್ಕಾರವನ್ನು ಬೆಳೆಸಿಕೊಳ್ಳುವುದು ಅಗತ್ಯ. ಇದನ್ನು ಶರಣಬಸವೇಶ್ವರ ಕಲಾ ಮಹಾವಿದ್ಯಾಲಯ ಕಲಿಸಿಕೊಡುತ್ತಿದೆ ಎಂದರು.

ವಿದ್ಯಾರ್ಥಿ ದೆಸೆಯಿಂದಲೇ ನಾಯಕತ್ವದ ಗುಣಗಳನ್ನು ಬೆಳೆಸಿಕೊಂಡು, ಅನ್ಯಾಯವನ್ನು ಖಂಡಿಸುವ ಹೋರಾಟದ ಮನೋಭಾವವನ್ನು ಮೈಗೂಡಿಸಿಕೊಳ್ಳಬೇಕು. ಪ್ರತಿಯೊಬ್ಬ ಯುವಜನತೆಯೂ ಜಲ, ಜಮೀನು ಹಾಗೂ ಜೀವನದ ಮಹತ್ವವನ್ನು ಅರಿತುಕೊಂಡು ಪರಿಸರದ ಬಗ್ಗೆ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಗೌರವ ಅತಿಥಿ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಉನ್ನತ ಗುರಿಯನ್ನು ಹೊಂದಿರಬೇಕು. ಆ ಗುರಿಯನ್ನು ತಲುಪಲು ನಿರಂತರವಾಗಿ ಶ್ರಮಿಸಬೇಕು. ವಿದ್ಯೆ ಎಂಬುದು ಕೇವಲ ಪಠ್ಯಕ್ಕೆ ಸೀಮಿತವಾಗಿರದೆ, ಸಂಸ್ಕಾರ ಕಲಿಸುವ ರಾಜಮಾರ್ಗವಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ನಿರಂತರ ಅಧ್ಯಯನದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಸುರೇಶಕುಮಾರ ನಂದಗಾಂವ ಮಾತನಾಡಿದರು.

ಪ್ರಾಧ್ಯಾಪಕ ಡಾ. ಶಿವರಾಜ ಶಾಸ್ತ್ರಿ, ಹೇರೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕು. ಸಾಯಿರಾಜ ಸ್ವಾಗತಿಸಿದರು. ಫಾಯಿಜಾ ಖಾನುಂ ಮತ್ತು ಪ್ರೇಮರಂಗ ನಿರೂಪಿಸಿದರು. ವಿದ್ಯಾರ್ಥಿ ಸಂಘದ ಸಲಹೆಗಾರ್ತಿ ಡಾ. ಆರತಿ ರಾಮಚಂದ್ರ ವಂದಿಸಿದರು. ಸಂಗೀತ ವಿಭಾಗದ ಮುಖ್ಯಸ್ಥರು ಹಾಗೂ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಯುವ ಸಂಗಮದ 7ನೇ ಹಂತದ ಕರ್ನಾಟಕ ಪ್ರವಾಸ ಸಮಾಪ್ತಿ



ಕಲಬುರಗಿ,ಅ.07-

ಭಾರತ ಸರ್ಕಾರದ ಶಿಕ್ಷಣ ಸಚಿವಾಲಯದ ಏಕ್ ಭಾರತ್ ಶ್ರೇಷ್ಠ ಭಾರತ್ ಉಪಕ್ರಮದಡಿ ಆಯೋಜಿಸಲಾಗಿದ್ದ ಯುವ ಸಂಗಮದ 7ನೇ ಹಂತದ ಕರ್ನಾಟಕ ಪ್ರವಾಸ ಯಶಸ್ವಿಯಾಗಿ ಮುಕ್ತಾಯ ಗೊಂಡಿದೆ. ಸೆ. 28ರಿಂದ ಅ. 3ರವರೆಗೆ ನಡೆದ ಪ್ರವಾಸದಲ್ಲಿ ಮಧ್ಯಪ್ರದೇಶದ 51 ಸದಸ್ಯರ ಯುವ ನಿಯೋಗ ಭಾಗವಹಿಸಿತ್ತು. ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ) ಪ್ರವಾಸದ ಆತಿಥ್ಯ ವಹಿಸಿತ್ತು. ಯುವ ನಿಯೋಗವು ಬೀದರ್ ಬೆಂಗಳೂರು ಹಾಗೂ ಕಲಬುರಗಿಗೆ ಭೇಟಿ ನೀಡಿ ಕರ್ನಾಟಕದ ಐತಿಹಾಸಿಕ, ಸಾಂಸ್ಕೃತಿಕ, ಶೈಕ್ಷಣಿಕ, ವೈಜ್ಞಾನಿಕ ಹಾಗೂ ಕೃಷಿ ಕ್ಷೇತ್ರಗಳ ಪರಿಚಯ ಪಡೆದುಕೊಂಡಿತು.

ಬೀದರ್‌ನಲ್ಲಿ ಕೋಟೆ, ಗುರುದ್ವಾರ ನಾನಕ್ ಝೀರಾ ಸಾಹೇಬ್ ಹಾಗೂ ಬೀದ್ರಿ ಕಲಾ ಕೇಂದ್ರಗಳಿಗೆ ಭೇಟಿ ನೀಡಿದ ನಿಯೋಗ, ಪದ್ಮಶ್ರೀ ಪುರಸ್ಕೃತ ಬೀದ್ರಿ ಕಲಾವಿದ ಶಾ ರಶೀದ್ ಅಹಮದ್ ಖಾದ್ರಿ ಅವರೊಂದಿಗೆ ಸಂವಾದ ನಡೆಸಿತು.

ಬೆಂಗಳೂರಿನಲ್ಲಿ ಭಾರತೀಯ ನಿರ್ವಹಣಾ ಸಂಸ್ಥೆ (ಐಐಎಂಬಿ), ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತುಸಂಗ್ರಹಾಲಯ ಹಾಗೂ ಇಸ್ರೋ ಟೆಲಿಮೆಟ್ರಿ, ಟ್ರ್ಯಾಕಿಂಗ್ ಮತ್ತು ಕಮಾಂಡ್ ನೆಟ್‌ವರ್ಕ್ (ಐಎಸ್‌ಟಿಆರ್‌ಎಸಿ)ಗೆ ಭೇಟಿ ನೀಡಿ ಶಿಕ್ಷಣ, ವಿಜ್ಞಾನ ಮತ್ತು ಬಾಹ್ಯಾಕಾಶ ತಂತ್ರಜ್ಞಾನದ ಕುರಿತು ಮಾಹಿತಿ ಪಡೆದುಕೊಂಡಿತು. ಲೋಕಭವನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರೊಂದಿಗೆ ಸಂವಾದ ನಡೆಸಿತು.

ಕಲಬುರಗಿಯಲ್ಲಿ ತೊಗರಿ ಬೇಳೆ ಸಂಸ್ಕರಣಾ ಘಟಕಕ್ಕೆ ಭೇಟಿ ನೀಡಿದ ನಿಯೋಗ, ತೊಗರಿ ಉತ್ಪಾದನೆ, ಸಂಸ್ಕರಣೆ ಹಾಗೂ ಕೃಷಿ ಆಧಾರಿತ ಆರ್ಥಿಕತೆಯ ಕುರಿತು ಮಾಹಿತಿ ಪಡೆದುಕೊಂಡಿತು.

ಸಿಯುಕೆನಲ್ಲಿ ನಡೆದ ಸಮಾರೋಪ ಸಮಾರಂಭದಲ್ಲಿ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅಧ್ಯಕ್ಷತೆ ವಹಿಸಿದ್ದರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕರ್ನಾಟಕ ಹಾಗೂ ಮಧ್ಯಪ್ರದೇಶದ ಯುವಕರು ವಿವಿಧ ಸಾಂಪ್ರದಾಯಿಕ ಮತ್ತು ಬುಡಕಟ್ಟು ನೃತ್ಯಗಳನ್ನು ಪ್ರದರ್ಶಿಸಿದರು. ಯುವ ಸಂಗಮದ 7ನೇ ಹಂತದ ನೋಡಲ್ ಅಧಿಕಾರಿ ಡಾ. ಎಂ. ಶಿವ ಹಾಗೂ ಕಾರ್ಯಕ್ರಮ ಸಂಯೋಜಕ ಡಾ. ಜಗದೀಶ್ ಬಿರಾದಾರ್ ಅವರ ನೇತೃತ್ವದಲ್ಲಿ ನಡೆದ ಪ್ರವಾಸವು ಎರಡೂ ರಾಜ್ಯಗಳ ಯುವಜನರ ನಡುವೆ ಸಾಂಸ್ಕೃತಿಕ ವಿನಿಮಯ, ಪರಸ್ಪರ ತಿಳುವಳಿಕೆ ಹಾಗೂ ರಾಷ್ಟ್ರೀಯ ಏಕತೆಯ ಮನೋಭಾವವನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸಿತು.

# ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ: ಉಚಿತ ಆರೋಗ್ಯ ತಪಾಸಣಾ ಶಿಬಿರ ಭಾರತೀಯ ಪರಂಪರೆಯ ಆಯುರ್ವೇದ ಚಿಕಿತ್ಸೆಯಿಂದ ಆರೋಗ್ಯ ವೃದ್ಧಿ : ಕೇಶವ ರೆಡ್ಡಿ

ಔಷಧ ತಯಾರಿಕೆಗೆ ಅಗತ್ಯವಾಗುವ ಹಲವು ಔಷಧೀಯ ಗಿಡಮೂಲಿಕೆಗಳನ್ನು ಸಂಸ್ಥೆ ಆವರಣದಲ್ಲಿಯೇ ಬೆಳೆಸಲಾಗುತ್ತಿದೆ. ಕೆಲವು ಸಸ್ಯಗಳಿಂದ ಔಷಧೀಯ ತೈಲಗಳನ್ನು ತಯಾರಿಸಲಾಗುತ್ತಿದ್ದು, ಆಸ್ಪತ್ರೆಯಲ್ಲಿ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಆಯುರ್ವೇದ ಚಿಕಿತ್ಸಾ ಸೌಲಭ್ಯಗಳು ಲಭ್ಯವಿವೆ ಎಂದು ಮಾಹಿತಿ ನೀಡಿದರು.

ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ ಜಾಗಟಗಲ್ ಮಾತನಾಡಿ, ಸಾಮಾನ್ಯವಾಗಿ ಆರೋಗ್ಯ ಸಮಸ್ಯೆ ಎದುರಾದಾಗ ಅಲೋಪಥಿ ಚಿಕಿತ್ಸೆ ಯತ್ತ ಹೆಚ್ಚಿನವರು ಮೊರೆ ಹೋಗುತ್ತಾರೆ. ಆದರೆ ಆಯುರ್ವೇದ ಚಿಕಿತ್ಸಾ ಪದ್ಧತಿಯ ಬಗ್ಗೆಯೂ ಸಾರ್ವಜನಿಕರಲ್ಲಿ ಅರಿವು ಹೆಚ್ಚಬೇಕಾಗಿದೆ. ಸೂಕ್ತ ವೈದ್ಯಕೀಯ ಸಲಹೆಯೊಂದಿಗೆ ಆಯುರ್ವೇದ ಚಿಕಿತ್ಸೆ ಯನ್ನು ಪಡೆದುಕೊಳ್ಳುವುದು ಉತ್ತಮ. ಉಚಿತ ಆರೋಗ್ಯ ತಪಾಸಣಾ ಶಿಬಿರದ ಸದುಪಯೋಗವನ್ನ ಎಲ್ಲಾ ಪತ್ರಕರ್ತರು ಪಡೆಯಬೇಕು ಎಂದು ಹೇಳಿದರು.

ಶಿಬಿರದಲ್ಲಿ ಪತ್ರಕರ್ತರ ಆರೋಗ್ಯ ತಪಾಸಣೆ ನಡೆಸಿದ ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ವೈದ್ಯರು, ಅಗತ್ಯ ವೈದ್ಯಕೀಯ ಸಲಹೆಗಳನ್ನು ನೀಡಿದರು. ಹಲವು ಪತ್ರಕರ್ತರು ಆರೋಗ್ಯ ತಪಾಸಣೆಗೆ ಒಳಗಾಗಿ ಆಯುರ್ವೇದ ಚಿಕಿತ್ಸಾ ವಿಧಾನಗಳ ಕುರಿತು ವೈದ್ಯರಿಂದ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಎಚ್. ವೀರನಗೌಡ, ರಘುನಾಥ ರೆಡ್ಡಿ ಮನ್ಸ ಲಾಪೂರ, ರಂಗನಾಥ್, ಆನಂದ್ ವಿಕೆ, ಚೆನ್ನಬಸವ ಬಾಗಲವಾಡ, ಖಾನ್ ಮೊಮೀನ್, ವೆಂಕಟೇಶ ಹೂಗಾರ, ಮಲ್ಲಿಕಾರ್ಜುನ ಸ್ವಾಮಿ, ಗುರು ಗೌಡ, ರಾಜು ಸೇರಿದಂತೆ ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಹಲವು ಪತ್ರಕರ್ತರು, ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ವೈದ್ಯರು, ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**



# ಅಂಬೇಡ್ಕರ್ ವಸತಿ ನಿಲಯದಲ್ಲಿ ಊಟ ಸೇವಿಸಿದ 10ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥ

ಕಲಬುರಗಿ,ಅ.07-

ಆಳಂದ ಪಟ್ಟಣದಲ್ಲಿರುವ ಡಾ. ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ವಸತಿ ನಿಲಯದಲ್ಲಿ ಊಟ ಸೇವಿಸಿದ ಬಳಿಕ 10ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅಸ್ವಸ್ಥಗೊಂಡಿರುವ ಘಟನೆ ಮಂಗಳವಾರ ನಡೆದಿದೆ.

ವಿದ್ಯಾರ್ಥಿಗಳಿಗೆ ಹೊಟ್ಟೆನೋವು ಹಾಗೂ ವಾಂತಿ ಕಾಣಿಸಿಕೊಂಡಿದ್ದು, ತಕ್ಷಣ ಅವರನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ವಿದ್ಯಾರ್ಥಿಗಳು ರೊಟ್ಟಿ, ಅನ್ನ ಹಾಗೂ ಸಾಂಬರ್ ಸೇವಿಸಿದ ಬಳಿಕ ಹೊಟ್ಟೆನೋವು ಸೇರಿದಂತೆ ಅಸ್ವಸ್ಥತೆಯ ಲಕ್ಷಣಗಳು ಕಾಣಿಸಿಕೊಂಡಿವೆ ಎಂದು ತಿಳಿದುಬಂದಿದೆ. ಆಹಾರ ಸೇವಿಸಿದ ಬಳಿಕವೇ ವಿದ್ಯಾರ್ಥಿಗಳು ಅಸ್ವಸ್ಥಗೊಂಡಿರುವ ಹಿನ್ನೆಲೆಯಲ್ಲಿ ಆಹಾರ ವಿಷಬಾಧೆ (ಫುಡ್ ಪಾಯಿಸನಿಂಗ್) ಶಂಕೆ ವ್ಯಕ್ತವಾಗಿದೆ.

ವಸತಿ ನಿಲಯಕ್ಕೆ ಕಳಪೆ ಗುಣಮಟ್ಟದ ಆಹಾರ ಸಾಮಗ್ರಿ ಸರಬರಾಜಾಗಿರುವುದರಿಂದಲೇ ಘಟನೆ ಸಂಭವಿಸಿರಬಹುದು ಎಂಬ ಅನುಮಾನವೂ ವ್ಯಕ್ತವಾಗಿದೆ.

ಘಟನೆ ತಿಳಿದು ತಾಲೂಕಿನ ಸಮಾಜ ಕಲ್ಯಾಣಾಧಿಕಾರಿ ವಿಜಯಲಕ್ಷ್ಮಿ ಹೋಳ್ಕರ್ ವಾರ್ಡನ್ ಸೇರಿದಂತೆ ಇತರೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ವಸತಿ ನಿಲಯದ ಆಹಾರ ವ್ಯವಸ್ಥೆ ಹಾಗೂ ಅಡುಗೆ ಸಾಮಗ್ರಿಗಳನ್ನು ಪರಿಶೀಲಿಸಿದರು.

ಬಳಿಕ ಸರ್ಕಾರಿ ಆಸ್ಪತ್ರೆಗೆ ತೆರಳಿ ಅಸ್ವಸ್ಥ ವಿದ್ಯಾರ್ಥಿಗಳ ಆರೋಗ್ಯದ ಕುರಿತು ಮಾಹಿತಿ ಪಡೆದುಕೊಂಡ ಅಧಿಕಾರಿಗಳು, ಘಟನೆಗೆ ಕಾರಣವೇನು ಎಂಬುದರ ಕುರಿತು ಪರಿಶೀಲನೆ ನಡೆಸುತ್ತಿದ್ದಾರೆ.

ನಿಮ್ಮೂರು ಸುದ್ದಿ

## ಸಂಪಾದಕೀಯ



# ಪ್ರಧಾನಿಗೂ ಸಿಗದ ವಿನಾಯಿತಿ ಇದು ಪ್ರಜಾಪ್ರಭುತ್ವದ ಮರಣ ಶಾಸನವಷ್ಟೇ!

ಚುನಾವಣೆಯ ಕಾವಲುಗಾರನಿಗೆ ಕಾನೂನಿನ ಕವಚ ಕುಂಡಲಗಳನ್ನು ನೀಡಿ, ಕಾನೂನಿನ ಕೈಗಳು ಮುಟ್ಟದಂತೆ, ಪ್ರಶ್ನಾತೀತ ಕೋಟೆಯೊಳಗೆ ಕೂರಿಸಿದರೆ ಪ್ರಜಾಪ್ರಭುತ್ವದ ಕಾವಲು ಕಾಯುವವರು ಯಾರು? ಈ ದೇಶದ ಪ್ರಧಾನಿ, ರಾಷ್ಟ್ರಪತಿಗೂ ಸಿಗದ ಕಾನೂನು ರಕ್ಷಣೆಯೊಂದನ್ನು ಮೋಶಾ ಸರ್ಕಾರ ಮುಖ್ಯ ಚುನಾವಣಾ ಆಯುಕ್ತರಿಗೆ ಮಾತ್ರ ನೀಡಿದ್ದೇಕೆ? ಕಾನೂನು ತಿದ್ದುಪಡಿ ಮಾಡಿ ಇಂತಹ ಅಭೂತಪೂರ್ವ ರಕ್ಷಣೆಯನ್ನು ಗೆ ನೀಡಿರುವುದರ ಹಿಂದೆ ಯಾರ ಹಿತಾಸಕ್ತಿ ಅಡಗಿದೆ? ಮತದಾನದ ಹಕ್ಕಿನ ಕತ್ತು ಹಿಸುಕುತ್ತಿರುವ ಈ ರಕ್ಷಾ ಕವಚವನ್ನು ಗ್ಯಾನೇಶ್ ಗೆ ತೊಡಿಸಿರುವುದು ಪ್ರಜಾಪ್ರಭುತ್ವದ ರಕ್ಷಣೆಗೋ, ಮೋಶಾ ಸರ್ಕಾರದ ಸಂರಕ್ಷಣೆಗೋ?

ಪ್ರಜಾಪ್ರಭುತ್ವದ ಅತಿ ದೊಡ್ಡ ಆಧಾರಸ್ತಂಭಗಳೆಂದರೆ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳು. ಅಂತಹ ಚುನಾವಣೆಯನ್ನು ನಡೆಸುವ ಹೊಣೆ ಹೊತ್ತಿರುವ ವ್ಯಕ್ತಿ, ಯಾವುದೇ ಸರ್ಕಾರದ ಕಪಿಮುಷ್ಠಿಗೆ ಸಿಲುಕಕೂಡದು, ಜನಸಾಮಾನ್ಯರ ಮತದಾನದ ಹಕ್ಕಿಗೆ ಕುತ್ತು ತರುವ ನಿರ್ಧಾರಗಳನ್ನು ಕೈಗೊಂಡಾಗ ಕಾನೂನಿನ ಕಠಿಣ ಪರಿವೀಕ್ಷಣೆಗೆ ಒಳಪಡಬೇಕು ಎನ್ನುತ್ತದೆ ಕಾನೂನು. ಆದರೆ, ಮೋಶಾ ಸರ್ಕಾರ 2023ರ ಡಿಸೆಂಬರ್‌ನಲ್ಲಿ ಜಾರಿಗೆ ತಂದ ಮುಖ್ಯ ಚುನಾವಣಾ ಆಯುಕ್ತರು ಮತ್ತು ಇತರ ಚುನಾವಣಾ ಆಯುಕ್ತರ ಕಾಯಿದೆಯು ಚುನಾವಣಾ ಆಯೋಗದ ಸ್ವಾಯತ್ತತೆಯನ್ನು ಸಂಪೂರ್ಣವಾಗಿ ಮೊಟಕುಗೊಳಿಸಿದೆ. ಮಾರ್ಚ್ 2023ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ಐತಿಹಾಸಿಕ ತೀರ್ಪಿನ ಪ್ರಕಾರ, ಚುನಾವಣಾ ಆಯುಕ್ತರ ಆಯ್ಕೆ ಸಮಿತಿಯಲ್ಲಿ ಪ್ರಧಾನಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ () ಇರಬೇಕಿತ್ತು. ಆದರೆ ಕಾರ್ಯಾಂಗದ ಮೇಲಿನ ತನ್ನ ಹಿಡಿತವನ್ನು ಬಿಟ್ಟುಕೊಡಲು ಇಚ್ಛಿಸದ ಕೇಂದ್ರ ಬಿಜೆಪಿ ಸರ್ಕಾರ, ಹೊಸ ಕಾಯಿದೆಯ ಮೂಲಕ ಆಯ್ಕೆ ಸಮಿತಿಯಿಂದ ಸಿಜೆಐ ಅವರನ್ನು ಹೊರಗಿಟ್ಟು, ಅವರ ಜಾಗದಲ್ಲಿ ಪ್ರಧಾನಿಯಿಂದ ನಾಮನಿರ್ದೇಶನಗೊಳ್ಳುವ ಒಬ್ಬ ಕೇಂದ್ರ ಸಂಪುಟ ಸಚಿವರನ್ನು ಸೇರಿಸಿಕೊಂಡಿತು. ಮೂವರ ಸಮಿತಿಯಲ್ಲಿ ಇಬ್ಬರು ಸರ್ಕಾರದವರೇ ಇರುವುದರಿಂದ ಆಡಳಿತ ಪಕ್ಷದ ಏಕಪಕ್ಷೀಯ ಮತ್ತು ಮನಸ್ಸಿ ಗೆ ಬಂದ ನಿರ್ಧಾರಗಳಿಗೆ ನೇರ ದಾರಿ ಮಾಡಿಕೊಡಲಾಯಿತು.

ಸ್ವತಃ ಸರ್ವೋಚ್ಚ ನ್ಯಾಯಾಲಯವೇ ''ಈ ಮಟ್ಟದ ವಿನಾಯಿತಿ ದೇಶದ ನ್ಯಾಯಾಧೀಶರಿಗೂ ಇಲ್ಲ'' ಎಂದು ಮೌಖಿಕವಾಗಿ ಅಚ್ಚರಿ ವ್ಯಕ್ತಪಡಿಸಿತ್ತು. ಹಿರಿಯ ವಕೀಲರು ಕೂಡ ''ಪ್ರಧಾನ ಮಂತ್ರಿಗಳಿಗೂ ಕೂಡ ಇಂತಹ ರಕ್ಷಣೆ ಇಲ್ಲ'' ಎಂದು ನ್ಯಾಯಾಲಯದ ಗಮನಕ್ಕೆ ತಂದಿರುವುದು ಈ ಕಾಯಿದೆಯ ದುರುದ್ದೇಶಕ್ಕೆ ಹಿಡಿದ ಕನ್ನಡಿಯಾಗಿದೆ.

ಅಲ್ಲದೆ, ಈ ಕಾಯಿದೆಯ ಸೆಕ್ಷನ್ 16ರ ಮೂಲಕ ಮುಖ್ಯ ಚುನಾವಣಾ ಆಯುಕ್ತರಿಗೆ () ದೇಶದ ಇತಿಹಾಸದಲ್ಲೇ ಅತ್ಯಂತ ವಿವಾದಾತ್ಮಕವಾದ ಕಾನೂನು ರಕ್ಷಣೆಯನ್ನು ( ) ನೀಡಲಾಗಿದೆ. ಸಂವಿಧಾನದ ಪ್ರಕಾರ, ರಾಷ್ಟ್ರಪತಿ ಅಥವಾ ರಾಜ್ಯಪಾಲರು ಅಧಿಕಾರದಲ್ಲಿರುವ ಅವಧಿಯಲ್ಲಿ ಮಾತ್ರ ಅವರ ಅಧಿಕೃತ ಕರ್ತವ್ಯಗಳ ನಿರ್ವಹಣೆಗೆ ಸಂಬಂಧಿಸಿದಂತೆ ಯಾವುದೇ ಕ್ರಿಮಿನಲ್ ಮೊಕದ್ದಮೆ ಹೂಡುವಂತಿಲ್ಲ. ಆದರೆ ಅವರು ಹುದ್ದೆಯಿಂದ ಕೆಳಗಿಳಿದ ನಂತರ ಅಥವಾ ವ್ಯಕ್ತಿಗತ ಕೃತ್ಯಗಳಿಗೆ ಕಾನೂನು ಕ್ರಮ ಎದುರಿಸಬೇಕಾಗುತ್ತದೆ. ಸಿವಿಲ್ ಮೊಕದ್ದಮೆಗಳ ವಿಚಾರದಲ್ಲೂ 2 ತಿಂಗಳ ಮುಂಗಡ ನೋಟಿಸ್ ನೀಡಿ ಕ್ರಮ ಜರುಗಿಸಬಹುದು. ದೇಶದ ಪ್ರಧಾನ ಮಂತ್ರಿಯಾದರೂ ಸಹ ಯಾವುದೇ ಕಾನೂನು ಅಥವಾ ಅಪರಾಧ ಕೃತ್ಯಗಳಿಂದ ಸಂಪೂರ್ಣ ವಿನಾಯಿತಿ ಪಡೆದಿಲ್ಲ. ಪ್ರಧಾನಿಯಾದರೂ ಸಾಮಾನ್ಯ ಪ್ರಜೆಯಂತೆ ಕಾನೂನಿನ ವಿಚಾರಣೆ ಮತ್ತು ಕೋರ್ಟ್ ಕಟಕಟೆಗೆ ಒಳಪಡುತ್ತಾರೆ. ಆದರೆ 2023ರ ಕಾಯಿದೆಯ ಸೆಕ್ಷನ್ 16ರ ಅಡಿಯಲ್ಲಿ ಮುಖ್ಯ ಚುನಾವಣಾ ಆಯುಕ್ತರಿಗೆ ನೀಡಿರುವ ರಕ್ಷಣೆಯು ಅವರು ಅಧಿಕಾರದಲ್ಲಿದ್ದಾಗ ಮಾತ್ರವಲ್ಲ, ಹುದ್ದೆಯಿಂದ ನಿವೃತ್ತರಾದ ಮೇಲೂ (ಜೀವಮಾನ ಪೂರ್ತಿ) ಅನ್ವಯಿಸುತ್ತದೆ. ಅಧಿಕಾರಾವಧಿಯಲ್ಲಿ ಅವರು ಕೈಗೊಳ್ಳುವ ಯಾವುದೇ ಅಧಿಕೃತ ನಿರ್ಧಾರಗಳ ವಿರುದ್ಧ ಯಾರೂ ಕೂಡ ಸಿವಿಲ್ ಅಥವಾ ಕ್ರಿಮಿನಲ್ ಮೊಕದ್ದಮೆ ಹೂಡುವಂತಿಲ್ಲ ಎಂಬ ಕರಾಳ ನಿಯಮವನ್ನು ಇದರಡಿಯಲ್ಲಿ ತರಲಾಗಿದೆ. ಸರ್ಕಾರ ತಾನೇ ನೇಮಿಸಿಕೊಂಡಿರುವ ಹಾಲಿ ಸಿಇಸಿ ಗ್ಯಾನೇಶ್ ಕುಮಾರ್ ಅಧಿಕಾರದಲ್ಲಿರುವಾಗಲೇ ನಡೆಯುವ ದೇಶದ ಬೃಹತ್ ಚುನಾವಣೆಗಳ ಹಿನ್ನೆಲೆಯಲ್ಲಿ ಈ ಕಾಯಿದೆಯ ಮೂಲಕ ಮೋಶಾ ಸರ್ಕಾರ ತನ್ನ ಗುಪ್ತ ಕಾರ್ಯಸೂಚಿಗಳಿಗೆ ರಹದಾರಿ ನಿರ್ಮಿಸಿಕೊಂಡಿರುವುದು ಎದ್ದು ಕಾಣುತ್ತಿದೆ.

ಸಂವಿಧಾನದ ಆಶಯಗಳನ್ನು ಬುಡಮೇಲು ಮಾಡುವ ಈ ಕರಾಳ ಕಾನೂನು ತಿದ್ದುಪಡಿಯ ಹಿಂದಿನ ರಾಜಕೀಯ ಲೆಕ್ಕಾಚಾರಗಳು ಈಗ ಸ್ಪಷ್ಟವಾಗುತ್ತಿವೆ. ಸಿಇಸಿ ಗ್ಯಾನೇಶ್ ಕುಮಾರ್ ಅವರ ಅಧಿಕಾರಾವಧಿ 2029ರ ಜನವರಿ ತನಕ ಮುಂದುವರಿಯಲಿದೆ. ಈ ನಿರ್ಣಾಯಕ ಅವಧಿಯಲ್ಲಿ ದೇಶದ ಸುಮಾರು 20ಕ್ಕೂ ಹೆಚ್ಚು ರಾಜ್ಯಗಳ ವಿಧಾನಸಭೆಗಳಿಗೆ ಚುನಾವಣೆಗಳು ನಡೆಯಲಿವೆ. ಜೊತೆಗೆ ಮುಂದಿನ ಲೋಕ ಮಹಾಸಂಗ್ರಾಮದ ದಿಕ್ಸೂಚಿಯೂ ಇದೇ ಅವಧಿಯಲ್ಲಿ ನಿರ್ಧಾರವಾಗಲಿದೆ. ಇಂತಹ ಬೃಹತ್ ಮತ್ತು ಸಂವೇದನಾಶೀಲ ಚುನಾವಣಾ ಪರ್ವದ ಮುನ್ನವೇ, ಆಯೋಗದ ನಿರ್ಧಾರಗಳನ್ನು ಯಾರೂ ಪ್ರಶ್ನಿಸಬಾರದು, ನ್ಯಾಯಾಲಯದ ಅಂಗಳದಲ್ಲಿಯೂ ಆಯುಕ್ತರ ವಿರುದ್ಧ ಯಾವುದೇ ಕಾನೂನು ಕ್ರಮ ಜರುಗಿಸಬಾರದು ಎಂಬ ಮುನ್ನೆಚ್ಚರಿಕೆಯೊಂದಿಗೆ ಈ ರಕ್ಷಾ ಕವಚವನ್ನು ಹೆಣೆಯಲಾಗಿದೆ. ಈ ಮೂಲಕ ಮೋದಿ ಚುನಾವಣೆಗಳನ್ನು ಆಬಾಧಿತವಾಗಿ ಗೆಲ್ಲುವ ತಮ್ಮ ದಾರಿಯನ್ನು ಸುಗಮಗೊಳಿಸಿಕೊಂಡಿರುವುದು ಜಗಜ್ಜಾಹೀರಾಗಿದೆ.

ದೇಶಾದ್ಯಂತ ಅಭಿಯಾನದ ಹೆಸರಿನಲ್ಲಿ ಲಕ್ಷಾಂತರ ಅರ್ಹ ಮತದಾರರ ಹೆಸರುಗಳನ್ನು ವ್ಯವಸ್ಥಿತವಾಗಿ ಮತ್ತು ಏಕಪಕ್ಷೀಯವಾಗಿ ಕತ್ತರಿಸಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಹೆಚ್ಚಾಗುತ್ತಿವೆ. ಜನ ಬೀದಿಗಿಳಿದು ತಮ್ಮ ಮತದಾನದ ಹಕ್ಕನ್ನು ಕಸಿದುಕೊಳ್ಳದಂತೆ ಅಂಗಲಾಚುತ್ತಿದ್ದಾರೆ. ಇದೇ ನೆಲದಲ್ಲಿ ತಲೆಮಾರುಗಳಿಂದ ಜೀವಿಸುತ್ತಿರುವ ಲಕ್ಷಾಂತರ ಮಂದಿಗೆ ತಾವೂ ಈ ದೇಶದವರೇ ಎಂದು ಸಾಬೀತುಪಡಿಸಿಕೊಳ್ಳುವ ಅನಿವಾರ್ಯತೆ ಎದುರಾಗಿದೆ. ಆದರೆ, ಇಷ್ಟೊಂದು ಅರಾಜಕತೆ ಸೃಷ್ಟಿಯಾಗಲು ಕಾರಣಕರ್ತರಾದವರು ಮಾತ್ರ ಪ್ರಶ್ನಿಸಲು ಬಂದವರನ್ನೇ ಹತ್ತಿಕ್ಕಲು ಪೊಲೀಸರನ್ನು ಛೂ ಬಿಡುತ್ತಿದ್ದಾರೆ. ಪ್ರಜಾಪ್ರಭುತ್ವದ ಅತಿ ದೊಡ್ಡ ಅಸ್ತ್ರವಾಗಿರುವ ಮತದಾನದ ಹಕ್ಕನ್ನು ಜನರಿಂದ ಕಿತ್ತುಕೊಳ್ಳುವ ಈ ಹುನ್ನಾರದ ಹಿಂದೆ ಕೇಂದ್ರ ಬಿಜೆಪಿ ಸರ್ಕಾರದ ಹಿತಾಸಕ್ತಿಗಳು ಕೆಲಸ ಮಾಡುತ್ತಿವೆ ಎಂಬುದನ್ನು ತಮ್ಮದೇ ವ್ಯರ್ಥ ಪ್ರಯತ್ನದ ಮೂಲಕ ಬಿಚ್ಚಿಡುತ್ತಿದ್ದಾರೆ.

ಆಯೋಗದ ಈ ತಪಾಸಣೆರಹಿತ ಮತ್ತು ಶಂಕಿತ ಧೋರಣೆಯ ವಿರುದ್ಧ ವಿರೋಧ ಪಕ್ಷಗಳು ಧ್ವನಿ ಎತ್ತಿದಾಗ, ಆಡಳಿತ ವ್ಯವಸ್ಥೆ ಅವರನ್ನು ದಮನ ಮಾಡುವ ಸರ್ವಾಧಿಕಾರಿ ಹಾದಿಯನ್ನು ಹಿಡಿದಿದೆ. ಮತಗಳ್ಳತನ ಹಾಗೂ ಪ್ರಜಾಪ್ರಭುತ್ವದ ಕಗ್ಗೊಲೆಯ ವಿರುದ್ಧ ಪ್ರಶ್ನೆ ಮಾಡುವ ವಿಪಕ್ಷಗಳ ನಾಯಕರನ್ನು ದೆಹಲಿಯ ರಾಜಬೀದಿಗಳಲ್ಲಿ ಪೊಲೀಸರ ಮೂಲಕ ಎಳೆದಾಡುವುದು, ಬಸ್‌ಗಳಲ್ಲಿ ಬಲವಂತವಾಗಿ ತೂರಿಸಿ ಕರೆದೊಯ್ಯುವುದು, ಜನತೆಯ ಸಂವಿಧಾನದತ್ತ ಹಕ್ಕಿಗಾಗಿ ರಾತ್ರಿಯಿಡೀ ಧರಣಿ ನಡೆಸಬೇಕಾದಂತಹ ಅಮಾನವೀಯ ವಾತಾವರಣ ಸೃಷ್ಟಿಸುವುದು ಭಾರತದ ಒಕ್ಕೂಟ ವ್ಯವಸ್ಥೆಯನ್ನು ಪತನಕ್ಕೆ ತಳ್ಳುತ್ತಿರುವ ಪ್ರಯತ್ನವಾಗಿದೆ. ಸಾಂವಿಧಾನಿಕ ಸಂಸ್ಥೆಗಳು ತಮ್ಮ ಸ್ವಾಯತ್ತತೆಯನ್ನು ಕಳೆದುಕೊಂಡು ಸರ್ಕಾರದ ಕೈಗೊಂಬೆಯಾದಾಗ, ದೇಶದ ಪ್ರಜೆಗಳ ಮೂಲಭೂತ ಹಕ್ಕುಗಳ ರಕ್ಷಣೆಗಾಗಿ ಬೀದಿಗಿಳಿದು ಹೋರಾಡಬೇಕಾದ ಈ ದುಸ್ಥಿತಿಯು ಭಾರತದ ಸಂವಿಧಾನಾತ್ಮಕ ಇತಿಹಾಸದಲ್ಲಿ ಒಂದು ಕಪ್ಪು ಚುಕ್ಕೆ. ಆದರೆ ಮೋಶಾ ಜೋಡಿಯ ಹುನ್ನಾರ ಫಲಿಸಲಾರವು ಎಂಬ ಆಶಾವಾದವನ್ನು ಇತ್ತೀಚಿನ ಪ್ರತಿಭಟನಾ ವಿದ್ಯಮಾನಗಳು ಹುಟ್ಟಿಸಿವೆ. ಈ ದೇಶದ ಯುವಜನ ಎಚ್ಚೆತ್ತಿದ್ದಾರೆ. ಮೋದಿ ಸರ್ಕಾರದ ದುಷ್ಟ ಹುನ್ನಾರಗಳನ್ನು ಆಗಗೊಡುವುದಿಲ್ಲ ಎಂಬ ಭರವಸೆ ಹುಟ್ಟಿಸಿದ್ದಾರೆ. ಕಳೆದ 13 ವರ್ಷಗಳಿಂದ ದೇಶದ ಜನಮಾನಸದಲ್ಲಿ ತುಂಬಿದ್ದ ಭೀತಿಯ ವಾತಾವರಣ ಕರಗತೊಡಗಿದೆ.

ನ್ಯಾಯಾಂಗದ ಕಣ್ಣಿಗೆ ಮಣ್ಣೆರಚಿ, ಸಂವಿಧಾನದ ಮೂಲಭೂತ ತತ್ವಗಳನ್ನು ತುಳಿದು ಜಾರಿಗೆ ತಂದಿರುವ ಈ ಕರಾಳ ಕಾನೂನು ರಕ್ಷಾ ಕವಚವು ಅಧಿಕಾರಶಾಹಿಯ ಅಹಂಕಾರ ಮತ್ತು ಸರ್ವಾಧಿಕಾರಿ ಧೋರಣೆ ದೇಶದ ಮತದಾರರ ಹಕ್ಕುಗಳು ಅಡಮಾನವಾಗುತ್ತಿರುವ ಈ ದುಸ್ಥಿತಿ ಯಾವ ಕಾರಣಕ್ಕೂ ಮುಂದುವರೆಯಬಾರದು. ಅಂತ್ಯಗೊಳ್ಳಲೇಬೇಕು. ಪ್ರಜಾಪ್ರಭುತ್ವ ಉಳಿಯಬೇಕೆಂದರೆ, ಸಾಂವಿಧಾನಿಕ ಸಂಸ್ಥೆಗಳನ್ನು ಆಳುವವರ ಕಪಿಮುಷ್ಠಿಯಲ್ಲಿಡುವ ಇಂತಹ ಕಾಯಿದೆಯನ್ನು ಸುಪ್ರೀಂ ಕೋರ್ಟ್ ಕೂಡಲೇ ರದ್ದುಗೊಳಿಸಬೇಕು ಮತ್ತು ದೇಶದ ಮತದಾರರ ಅಸ್ತಿತ್ವವನ್ನು ರಕ್ಷಿಸಲು ಜನತೆ ಒಗ್ಗಟ್ಟಾಗಿ ಧ್ವನಿ ಎತ್ತಬೇಕು.

# ಜಿಎಸ್‌ಟಿ ಮಂಡಳಿ ಸಭೆ: ಅಧಿಕಾರ ಹಂಚಿಕೆಯ ಅಸಮತೋಲನ; ಏನಿದು ಜಿಎಸ್‌ಟಿ ಕೌನ್ಸಿಲ್?

ಜಿಎಸ್‌ಟಿ ಮಂಡಳಿಯು ದೇಶದ 'ಸಹಕಾರ ಒಕ್ಕೂಟ ವ್ಯವಸ್ಥೆ'ಗೆ ಒಂದು ಉದಾಹರಣೆಯಾಗಿದ್ದರೂ, ಮತದಾನದ ಪ್ರಕ್ರಿಯೆಯಲ್ಲಿ ಕೇಂದ್ರಕ್ಕಿರುವ ಮೇಲುಗೈ ರಾಜ್ಯಗಳ ಸ್ವಾಯತ್ತತೆಗೆ ಧಕ್ಕೆ ತರುತ್ತಿದೆ ಎಂಬುದು ಸ್ಪಷ್ಟ. ಜಿಎಸ್‌ಟಿ ಜಾರಿಗೆ ಬಂದ ನಂತರ ರಾಜ್ಯಗಳು ತಮ್ಮ ಸ್ವತಂತ್ರ ತೆರಿಗೆ ವಿಧಿಸುವ ಅಧಿಕಾರವನ್ನು ಕಳೆದುಕೊಂಡಿರುವುದರಿಂದ, ಮಂಡಳಿಯಲ್ಲಿ ತಮ್ಮ ಧ್ವನಿಗೆ ಸೂಕ್ತ ಮೌಲ್ಯ ಸಿಗಬೇಕು ಎಂಬ ಆಗ್ರಹ ರಾಜ್ಯಗಳದ್ದು.



ನಾಳೆ ಜಿಎಸ್‌ಟಿ ಮಂಡಳಿಯ ( ) ಸಭೆ ನಡೆಯಲಿದ್ದು, ತೆರಿಗೆ ದರಗಳ ಪರಿಷ್ಕರಣೆ, ವಿನಾಯಿತಿಗಳು ಮತ್ತು ಹೊಸ ನಿಯಮಾವಳಿಗಳ ಜಾರಿಗೆ ಸಂಬಂಧಿಸಿದಂತೆ ಹಲವು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವ ಸಾಧ್ಯತೆಯಿದೆ. ದೇಶದ ಆರ್ಥಿಕತೆಯ ಮೇಲೆ ನೇರ ಪರಿಣಾಮ ಬೀರುವ ಈ ಸಭೆಯು ಕೇಂದ್ರ ಮತ್ತು ಎಲ್ಲಾ ರಾಜ್ಯಗಳ ಹಣಕಾಸು ಸಚಿವರನ್ನು ಒಂದೇ ವೇದಿಕೆಗೆ ತರಲಿದೆ. ಆದರೆ ಅಸಮಾನ ಅಧಿಕಾರ ಹಂಚಿಕೆ ವಿರುದ್ಧ ಪದೇ ಪದೇ ಪ್ರಮುಖ ರಾಜ್ಯಗಳು ಧ್ವನಿ ಎತ್ತಬೇಕಾದ ಸ್ಥಿತಿ ಇಂದಿಗೂ ಹಾಗೆಯೇ ಇದೆ.

ದೇಶದ ತೆರಿಗೆ ವ್ಯವಸ್ಥೆಯಲ್ಲಿ ಒಂದು ದೇಶ, ಒಂದು ತೆರಿಗೆ ಎಂಬ ಪರಿಕಲ್ಪನೆಯನ್ನು ಮುಂದಿಟ್ಟು 2017ರ ಜುಲೈ 1 ರಂದು ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಜಾರಿಗೆ ತರಲಾಯಿತು. ಈ ತೆರಿಗೆ ವ್ಯವಸ್ಥೆಯ ನಿರ್ವಹಣೆ ಹಾಗೂ ನಿಯಮಗಳ ತಿದ್ದುಪಡಿಗಾಗಿ ಭಾರತೀಯ ಸಂವಿಧಾನದ ವಿಧಿ 279 ( 279) ಯಡಿಯಲ್ಲಿ ಈ ಜಿಎಸ್‌ಟಿ ಮಂಡಳಿಯನ್ನು ರಚಿಸಲಾಗಿದೆ.

ಕೇಂದ್ರ ವಿತ್ತ ಸಚಿವರು (ಪ್ರಸ್ತುತ ನಿರ್ಮಲಾ ಸೀತಾರಾಮನ್) ಈ ಮಂಡಳಿಯ ಅಧ್ಯಕ್ಷರಾಗಿದ್ದು, ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಅಥವಾ ತೆರಿಗೆ ಸಚಿವರು ಇದರ ಸದಸ್ಯರಾಗಿರುತ್ತಾರೆ. ತೆರಿಗೆ ದರಗಳ ನಿರ್ಧಾರ, ವಿನಾಯಿತಿಗಳು, ಕಾನೂನು ತಿದ್ದುಪಡಿಗಳು ಮತ್ತು ರಾಜ್ಯಗಳಿಗೆ ಪರಿಹಾರ ಹಂಚಿಕೆಯಂತಹ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವ ಏಕೈಕ ಅತ್ಯುನ್ನತ ಸಂಸ್ಥೆ ಇದಾಗಿದೆ.

ಆದರೆ, ಜಿಎಸ್‌ಟಿ ಮಂಡಳಿಯಲ್ಲಿ ನಿರ್ಧಾರಗಳನ್ನು ತೆಗೆದುಕೊಳ್ಳುವ ವಿಧಾನ ಮತ್ತು ಅಧಿಕಾರ ಹಂಚಿಕೆಯ ಬಗ್ಗೆ ಆರಂಭದಿಂದಲೂ ತೀವ್ರ ಚರ್ಚೆಗಳು ನಡೆಯುತ್ತಲೇ ಇವೆ. ದೇಶದ ಪ್ರಜಾಸತ್ತಾತ್ಮಕ ಒಕ್ಕೂಟ ವ್ಯವಸ್ಥೆಯಲ್ಲಿ ಪ್ರತಿಯೊಂದು ರಾಜ್ಯಕ್ಕೂ ಸಮಾನ ಧ್ವನಿ ಇರಬೇಕು ಎಂಬ ತತ್ವದ ಮೇಲೆ ಜಿಎಸ್‌ಟಿ ಕೌನ್ಸಿಲ್ ರೂಪುಗೊಂಡಿದೆ ಎಂದು ಹೇಳಲಾಗಿದ್ದರೂ, ಪ್ರಾಯೋಗಿಕವಾಗಿ ಕೇಂದ್ರ ಸರ್ಕಾರ ಮತ್ತು ರಾಜ್ಯಗಳ ನಡುವೆ ಅಧಿಕಾರದ ಅಸಮತೋಲನ ಸ್ಪಷ್ಟವಾಗಿ ಎದ್ದು ಕಾಣುತ್ತದೆ. ಜಿಎಸ್‌ಟಿ ಕೌನ್ಸಿಲ್‌ನ ಮತದಾನದ ನಿಯಮಗಳು ಮತ್ತು ನಿರ್ಧಾರ ಕೈಗೊಳ್ಳುವ ಹಕ್ಕುಗಳ ಹಿನ್ನೆಲೆಯಲ್ಲಿ ಈ ಅಸಮಾನ ಅಧಿಕಾರದ ಸ್ವರೂಪವನ್ನು ಅರ್ಥೈಸಿಕೊಳ್ಳುವುದು ಅತ್ಯಂತ ಅಗತ್ಯ.

ಏನಿದು ಜಿಎಸ್‌ಟಿ ಮಂಡಳಿ?

ಜಿಎಸ್‌ಟಿ ಮಂಡಳಿಯು ಕೇಂದ್ರ ಮತ್ತು ರಾಜ್ಯಗಳ ಜಂಟಿ ವೇದಿಕೆಯಾಗಿದೆ. ಸರಕು ಮತ್ತು ಸೇವೆಗಳ ಮೇಲೆ ಎಷ್ಟು ತೆರಿಗೆ ವಿಧಿಸಬೇಕು, ಯಾವ ವಸ್ತುವಿಗೆ ವಿನಾಯಿತಿ ನೀಡಬೇಕು, ಮತ್ತು ನಿಯಮಗಳ ಜಾರಿ ಹೇಗೆ ಇರಬೇಕು ಎಂಬುದನ್ನು ನಿರ್ಧರಿಸಲು ಈ ಮಂಡಳಿಯು ನಿಯಮಿತವಾಗಿ ಸಭೆ ಸೇರುತ್ತದೆ. ಸಂವಿಧಾನದ ನಿಯಮಗಳ ಪ್ರಕಾರ, ಜಿಎಸ್‌ಟಿ ಮಂಡಳಿಯಲ್ಲಿ ಯಾವುದೇ ಪ್ರಸ್ತಾವನೆ ಅಥವಾ ನಿರ್ಧಾರ ಅಂಗೀಕಾರವಾಗಬೇಕಾದರೆ ಸಭೆಯಲ್ಲಿ ಹಾಜರಿದ್ದು ಮತ ಚಲಾಯಿಸುವ ಸದಸ್ಯರ ಕನಿಷ್ಠ 3/4 ಭಾಗದಷ್ಟು (75%) ಬಹುಮತ ಅಗತ್ಯವಿರುತ್ತದೆ. ಕೇಂದ್ರ ಸರ್ಕಾರದ ಮತದ ಮೌಲ್ಯ ಒಟ್ಟು ಮತಗಳ 1/3 ಭಾಗ (33.33%) ಆಗಿದ್ದರೆ, ಎಲ್ಲಾ ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ ಒಟ್ಟು ಮತದ ಮೌಲ್ಯ ಉಳಿದ 2/3 ಭಾಗ (66.67%) ಆಗಿದೆ.

ಆದರೆ ಕೇಂದ್ರ ಸರ್ಕಾರಕ್ಕೆ ವೀಟೋ ಅಧಿಕಾರವಿದೆ. ಈ ಮತದಾನದ ರಚನೆಯೇ ಮಂಡಳಿಯಲ್ಲಿ ಅಸಮಾನ ಅಧಿಕಾರವನ್ನು ಸೃಷ್ಟಿಸುತ್ತದೆ. ಯಾವುದೇ ನಿರ್ಧಾರಕ್ಕೆ 75% ಬಹುಮತ ಬೇಕು. ಆದರೆ ಕೇಂದ್ರದ ಬಳಿ 33.33% ಮತಗಳಿವೆ. ಅಂದರೆ, ಎಲ್ಲಾ ರಾಜ್ಯಗಳು ಒಂದಾಗಿ ನಿರ್ಧಾರ ತೆಗೆದುಕೊಂಡರೂ, ಕೇಂದ್ರ ಸರ್ಕಾರ ಒಪ್ಪದಿದ್ದರೆ ಆ ನಿರ್ಧಾರ ಜಾರಿಯಾಗುವುದಿಲ್ಲ. ಕೇಂದ್ರಕ್ಕೆ ಪ್ರತ್ಯೇಕವಾಗಿ ನಿರ್ಧಾರವನ್ನು ತಡೆಯುವ ಸಾಮರ್ಥ್ಯವಿದೆ. ಪ್ರತಿಯೊಂದು ರಾಜ್ಯಕ್ಕೂ (ಚಿಕ್ಕದಾಗಲಿ ಅಥವಾ ದೊಡ್ಡದಾಗಲಿ) ಸಮಾನ ಮತದ ಮೌಲ್ಯ ನೀಡಲಾಗಿದೆ. ಆದರೆ, ಕೇಂದ್ರ ಸರ್ಕಾರದ ಬೆಂಬಲವಿಲ್ಲದೆ ರಾಜ್ಯಗಳು ಮಾತ್ರ ಸೇರಿ ಯಾವುದೇ ಸ್ವತಂತ್ರ ನಿರ್ಧಾರ ಕೈಗೊಳ್ಳಲು ಸಾಧ್ಯವಿಲ್ಲ. ಹಾಗಿದ್ದಾಗ ಯಾವುದೇ ಹಣಕಾಸು ನಿರ್ಧಾರವು ಕೇಂದ್ರ ಸರ್ಕಾರ ಒಪ್ಪುವುದಾದರೆ ಮಾತ್ರ ಜಾರಿಯಾಗುತ್ತದೆ.

2022ರ ಪ್ರಸಿದ್ಧ ಯೂನಿಯನ್ ಆಫ್ ಇಂಡಿಯಾ ವಿರುದ್ಧ ಮೋಹಿತ್ ಮಿನರಲ್ಸ್ ( . ) ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಅತ್ಯಂತ ಪ್ರಮುಖ ತೀರ್ಪನ್ನು ನೀಡಿತ್ತು. ಸುಪ್ರೀಂ ಕೋರ್ಟ್‌ನ ತೀರ್ಪಿನ ಪ್ರಕಾರ, ''ಜಿಎಸ್‌ಟಿ ಮಂಡಳಿಯ ಶಿಫಾರಸುಗಳು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮೇಲೆ ಕಾನೂನಾತ್ಮಕವಾಗಿ ಕಡ್ಡಾಯವಲ್ಲ, ಅವು ಕೇವಲ ಸಲಹಾತ್ಮಕ ಸ್ವರೂಪದವು.'' ದೇಶದ ಸಂವಿಧಾನವು ಕೇಂದ್ರ ಮತ್ತು ರಾಜ್ಯಗಳೆರಡಕ್ಕೂ ತೆರಿಗೆ ಶಾಸನ ಮಾಡುವ ಸಮಾನ ಅಧಿಕಾರವನ್ನು ನೀಡಿದೆ ಎಂದು ಕೋರ್ಟ್ ಸ್ಪಷ್ಟಪಡಿಸಿದೆ.

ಆದರೆ ಜಿಎಸ್‌ಟಿ ಮಂಡಳಿಯು ದೇಶದ ಸಹಕಾರ ಒಕ್ಕೂಟ ವ್ಯವಸ್ಥೆಗೆ ಒಂದು ಉದಾಹರಣೆಯಾಗಿದ್ದರೂ, ಮತದಾನದ ಪ್ರಕ್ರಿಯೆಯಲ್ಲಿ ಕೇಂದ್ರಕ್ಕಿರುವ ಮೇಲುಗೈ ರಾಜ್ಯಗಳ ಸ್ವಾಯತ್ತತೆಗೆ ಧಕ್ಕೆ ತರುತ್ತಿದೆ ಎಂಬುದು ಸ್ಪಷ್ಟ. ಜಿಎಸ್‌ಟಿ ಜಾರಿಗೆ ಬಂದ ನಂತರ ರಾಜ್ಯಗಳು ತಮ್ಮ ಸ್ವತಂತ್ರ ತೆರಿಗೆ ವಿಧಿಸುವ ಅಧಿಕಾರವನ್ನು ಕಳೆದುಕೊಂಡಿರುವುದರಿಂದ, ಮಂಡಳಿಯಲ್ಲಿ ತಮ್ಮ ಧ್ವನಿಗೆ ಸೂಕ್ತ ಮೌಲ್ಯ ಸಿಗಬೇಕು ಎಂಬ ಆಗ್ರಹ ರಾಜ್ಯಗಳದ್ದು. ಹೀಗಾಗಿ ನಾಳೆ ನಡೆಯಲಿರುವ ಜಿಎಸ್‌ಟಿ ಮಂಡಳಿ ಸಭೆಯು ಕೇವಲ ತೆರಿಗೆ ದರಗಳ ಬದಲಾವಣೆಗೆ ಮಾತ್ರ ಸೀಮಿತವಾಗದೆ, ಕೇಂದ್ರ ಮತ್ತು ರಾಜ್ಯಗಳ ನಡುವಿನ ಆರ್ಥಿಕ ಸಂಬಂಧ ಮತ್ತು ಅಧಿಕಾರ ಸಮತೋಲನದ ದೃಷ್ಟಿಯಿಂದಲೂ ಅತ್ಯಂತ ಮಹತ್ವದ್ದಾಗಿದೆ.

# ಅನುದಾನ ಕೊರತೆ: ವಿದ್ಯಾರ್ಥಿಗಳಿಂದ ನಿರ್ವಹಣಾ ಶುಲ್ಕ ವಸೂಲಿ, ಶಿಕ್ಷಕರ ಜೇಬಿಗೂ ಕತ್ತರಿ!

ಹಾವೇರಿ ಜಿಲ್ಲೆಯಲ್ಲಿ ಸರಕಾರಿ ಶಾಲೆಗಳಿಗೆ ನಿರ್ವಹಣಾ ವೆಚ್ಚದ ಅನುದಾನ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ಶಿಕ್ಷಕರು ನಿತ್ಯದ ಖರ್ಚು-ವೆಚ್ಚ ಸರಿದೂಗಿಸಲು ಪರದಾಡುವಂತಾಗಿದೆ. ಶಾಲೆ ನಡೆಸಲು ವಿದ್ಯಾರ್ಥಿಗಳಿಂದಲೇ ಹಣ ವಸೂಲಿ ಮಾಡುತ್ತಿರುವ ಆರೋಪ ಕೇಳಿಬಂದಿದ್ದು, ಪೋಷಕರಿಂದ ಮತ್ತು ಎಸ್‌ಎಫ್‌ಐ () ಸಂಘಟನೆಯಿಂದ ತೀವ್ರ ಆಕ್ರೋಶ ವ್ಯಕ್ತವಾಗಿದೆ.



ಖಾಸಗಿ ಶಿಕ್ಷಣ ಸಂಸ್ಥೆಗಳ ಪೈಪೋಟಿಯ ನಡುವೆಯು, ಶುಲ್ಕ ಕಡಿಮೆ ಇರುವುದರಿಂದ ಪಾಲಕರು ತಮ್ಮ ಮಕ್ಕಳನ್ನು ಸರಕಾರಿ ಶಾಲೆಗಳಿಗೆ ಪ್ರವೇಶ ಮಾಡುವರು. ಆದರೆ ಸರಕಾರ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಅನುದಾನ ನೀಡದೇ ಶಿಕ್ಷಕರು ದಿನನಿತ್ಯದ ನಿರ್ವಹಣಾ ವೆಚ್ಚವನ್ನು ಭರಿಸಲು ಪರದಾಡುವಂತ ಪರಿಸ್ಥಿತಿ ಎದುರಾಗಿದೆ. ಶಾಲಾ ನಿರ್ವಹಣೆಗೆ ಶುಲ್ಕವೆಂದು ವಿದ್ಯಾರ್ಥಿಗಳಿಂದ ಹಣ ಪಡೆಯುತ್ತಿರುವ ಕುರಿತು ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಾವೇರಿ ಜಿಲ್ಲೆಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ನಿರ್ವಹಣಾ ವೆಚ್ಚವನ್ನು ಭರಿಸಲು ಅನುದಾನದ ಕೊರತೆ ಎದುರಾಗಿದ್ದು, ಶಾಲೆಯ ಶಿಕ್ಷಕರು ನಿತ್ಯದ ಖರ್ಚು ವೆಚ್ಚಗಳನ್ನು ಸರಿದೂಗಿಸಲು ವಿದ್ಯಾರ್ಥಿಗಳಿಂದ ಹಣ ವಸೂಲಿ ಮಾಡುತ್ತಿರುವ ಆರೋಪ ಕೇಳಿ ಬಂದಿದೆ.

ಜಿಲ್ಲೆಯ ಕೆಲವು ಶಾಲೆಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಂದ 200ರಿಂದ 600ರೂ ಗಳವರೆಗೆ ಹಣ ವಸೂಲಿಮಾಡುತ್ತಿರುವ ಆರೋಪ ಕೇಳಿ ಬಂದಿದೆ. ಶಾಲೆಗಳಲ್ಲಿ ಪರೀಕ್ಷೆಗೆ ಹಾಗೂ ನಿರ್ವಹಣಾ ವೆಚ್ಚಕ್ಕೆ ವಿದ್ಯಾರ್ಥಿಗಳು ಪಾಲಕರಿಂದ ಹಣವನ್ನು ಪಡೆದುಕೊಂಡು ಶಿಕ್ಷಕರಿಗೆ ತಂದು ಕೊಡುತ್ತಿದ್ದಾರೆ. ಈ ವಸೂಲಿಯನ್ನು ಗಮನಿಸಿದ ಎಸ್‌ಎಫ್‌ಐ ಸಂಘಟನೆಗಳು ಹಾವೇರಿ ಪಟ್ಟಣದ ಅಶ್ವಿನಿ ನಗರದಲ್ಲಿ ಇರುವ ಸರಕಾರಿ ಉರ್ದು ಶಾಲೆಯಲ್ಲಿ ವೈಭವ ಲಕ್ಷ್ಮೀ ಪಾರ್ಕ್ ಶಾಲೆಯಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಂದ ಪ್ರವೇಶ ಶುಲ್ಕ ನೆಪ ಹೇಳಿ ಹಣ ವಸೂಲಿ ಮಾಡುತ್ತಿರುವುದ ಖಂಡಿಸಿ ಶಾಲೆ ಎದುರಿಗೆ ಪ್ರತಿಭಟನೆ ನಡೆಸಿದ್ದಾರೆ.

ಕೆಲವು ಶಾಲೆಗಳಲ್ಲಿ ಶಾಲೆಯ ನಿರ್ವಹಣಾ ವೆಚ್ಚವನ್ನು ಶಿಕ್ಷಕರು ಸಂಬಳದಲ್ಲಿಯೇ ಎತ್ತಿಟ್ಟು ಖರ್ಚುವೆಚ್ಚಗಳನ್ನು ನಿಭಾಯಿಸುವರು. ಇನ್ನೂ ಕೆಲ ಶಿಕ್ಷಕರು ಶಾಲಾ ನಿರ್ವಹಣೆ ಭರಿಸಲು ಅಂಗಡಿಗಳಲ್ಲಿ ಸಾಲ ಮಾಡುತ್ತಿದ್ದು, ಉದ್ರಿ ರೂಪದಲ್ಲಿ ವಿದ್ಯಾರ್ಥಿಗಳಿಗೆ ಅವಶ್ಯವಿರುವ ವಸ್ತುಗಳನ್ನು ತೆಗೆದುಕೊಂಡು ಬರುವಂತಾಗಿದೆ. ಇದರಿಂದ ತಪ್ಪಿಸಿಕೊಳ್ಳಲು ಸರಕಾರಿ ಶಾಲೆಗಳ ಶಿಕ್ಷಕರು ಶಾಲಾ ನಿರ್ವಹಣಾ ವೆಚ್ಚ, ಪರೀಕ್ಷಾ ಶುಲ್ಕ ವೆಚ್ಚವೆಂದು ಹೇಳಿ ವಿದ್ಯಾರ್ಥಿಗಳಿಂದ ಹಣ ಪಡೆದು ನಿರ್ವಹಣೆ ಮಾಡುವಂತಹ ಪರಿಸ್ಥಿತಿ ಶಿಕ್ಷಕರಿಗೆ ಎದುರಾಗಿದೆ.

ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ಅನುಗುಣವಾಗಿ ಸರಕಾರ ವಾರ್ಷಿಕ ನಿರ್ವಹಣಾ ವೆಚ್ಚವನ್ನು ಹತ್ತು ಸಾವಿರದಿಂದ ಎರಡು ಲಕ್ಷದ ವರೆಗೂ ನಿರ್ವಹಣಾ ವೆಚ್ಚದ ಅನುದಾನ ನೀಡಲಾಗುತ್ತಿದೆ. ಆದರೆ ಪ್ರಸಕ್ತ ವರ್ಷದಲ್ಲಿ ನಿರ್ವಹಣಾ ವೆಚ್ಚದ ಅನುದಾನ ನೀಡದೇ ಇರುವುದರಿಂದ ಶಿಕ್ಷಕರು ಪರದಾಡುವಂತಹ ಪರಿಸ್ಥಿತಿ ಎದುರಾಗಿದೆ.

ಶಾಲೆಗಳಲ್ಲಿ ನಿರ್ವಹಣಾ ವೆಚ್ಚಕ್ಕೆ ಅನುದಾನವನ್ನು ಸರ್ಕಾರ ನೀಡದೆ ಇರುವುದರಿಂದ ಶಿಕ್ಷಕರು ಶಾಲೆಯ ದಿನನಿತ್ಯದ ಖರ್ಚುವೆಚ್ಚಗಳನ್ನು ತಮ್ಮ ಸಂಬಳದಲ್ಲಿಯೇ ಎತ್ತಿಡುತ್ತಿದ್ದಾರೆ. ಕೆಲವರು ಸಾಲದ ರೂಪದಲ್ಲಿ ಅಥವಾ ವಿದ್ಯಾರ್ಥಿಗಳ ನಿರ್ವಹಣಾ ವೆಚ್ಚದ ಶುಲ್ಕವೆಂದೋ ಹೇಳುತ್ತಾ ವಿದ್ಯಾರ್ಥಿಗಳಿಂದ ಹಣ ವಸೂಲಿ ಮಾಡಿ ನಿರ್ವಹಣೆ ಮಾಡುವಂತ ಪರಿಸ್ಥಿತಿ ಎದುರಾಗಿದೆ.

ಜೊತೆಗೆ ಸರಕಾರಿ ಶಾಲೆಯೊಂದರ ಮುಖ್ಯೋಪಾಧ್ಯರು ಮಾತನಾಡಿ, ''ಎರಡು ನೂರಕ್ಕೂ ಹೆಚ್ಚಿರುವ ನಮ್ಮ ಶಾಲೆಯಲ್ಲಿ ಶಾಲೆಯ ನಿರ್ವಹಣಾ ವೆಚ್ಚವನ್ನು ಭರಿಸಲು ಶಿಕ್ಷಕರ ಸಂಬಳದಲ್ಲಿಯೇ ಸ್ವಲ್ಪ ಹಣವನ್ನು ಇರಿಸಿಕೊಂಡು, ನಿಭಾಯಿಸುತ್ತಿದ್ದೇವು. ಒಮ್ಮೊಮ್ಮೆ ಸ್ವಂತ ಹಣ ಹಾಕುತ್ತಿದ್ದೆ. ನಿರಂತರ ಸ್ವಂತ ಖರ್ಚು ಮಾಡಲು ಆಗುವುದಿಲ್ಲ. ಹಾಗಾಗಿ ವಿದ್ಯಾರ್ಥಿಗಳಿಗೆ, ಶಾಲೆಗೆ ಬೇಕಾಗುವ ಅವಶ್ಯ ಸಲಕರಣಗಳನ್ನು,ಅಡುಗೆ ಮಾಡಲು ತರಕಾರಿಗಳನ್ನು ತರಲು ಹೋದಾಗ ಉದ್ರಿ ಹೇಳಿ ತೆಗೆದುಕೊಂಡು ಬರುವಂತಾಗಿದೆ'' ಎಂದು ಹೇಳಿದರು.

ಈ ಕುರಿತು ಎಸ್‌ಎಫ್‌ಐ ಜಿಲ್ಲಾ ಅಧ್ಯಕ್ಷ ಅರುಣ್ ಕುಮಾರ್ ನಗವತ್ ಮಾತನಾಡಿ, ''ನಮ್ಮ ಸರಕಾರಿ ಶಾಲೆಗಳಲ್ಲಿ ಶಿಕ್ಷಕರು ವಿವಿಧ ಶುಲ್ಕಗಳ ನೆಪ ಹೇಳಿ ವಿದ್ಯಾರ್ಥಿಗಳ ಕಡೆಯಿಂದ ಹಣ ವಸೂಲಿ ಮಾಡುತ್ತಿರುವುದು ಖಂಡನೀಯ. ಈ ಕುರಿತು ಡಿ.ಡಿ.ಪಿ.ಐ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಇದನ್ನು ಪರಿಶೀಲಿಸಬೇಕು. ಶಾಲೆಗಳ ನಿರ್ವಹಣಾ ವೆಚ್ಚಕ್ಕಾಗಿ ಸರಕಾರ ಅನುದಾನ ಬಿಡುಗಡೆ ಮಾಡಬೇಕು. ಆಗ ಶಾಲೆಗಳ ಶಿಕ್ಷಕರು ಶಾಲಾ ನಿರ್ವಹಣೆಗೆಂದು ವಿದ್ಯಾರ್ಥಿಗಳಿಂದ ಹಣ ಪಡೆಯುವುದು, ಉದ್ರಿ ಹೇಳುವುದು ತಪ್ಪುತ್ತದೆ'' ಎಂದು ಹೇಳಿದರು.

ಸರಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ನಿರ್ವಹಣಾ ವೆಚ್ಚ ಪರಿಸಲು ಶಿಕ್ಷಕರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಸರಕಾರ ಸರಕಾರಿ ಶಾಲೆಗಳ ನಿರ್ವಹಣಾ ವೆಚ್ಚಕ್ಕಾಗಿ ಅನುದಾನ ಬಿಡುಗಡೆ ಮಾಡಿದರೆ ಶಿಕ್ಷಕರು ಶಾಲೆಗಳ ನಿರ್ವಹಣೆಗೆ ಸರಾಗವಾಗಿ ಮಾಡಲು ಅನುಕೂಲವಾಗಲಿದ್ದು, ವಿದ್ಯಾರ್ಥಿಗಳಿಗೂ ಒಳ್ಳೆಯ ಶಿಕ್ಷಣ ಕೊಡಲು ಸಾಧ್ಯವಾಗುತ್ತದೆ.

# ಹವಾಮಾನ ವರದಿ ಮುಂದಿನ 3 ದಿನ ಗುಡುಗು ಸಹಿತ ಭಾರೀ ಮಳೆ

ಮನ್ನಾರ್ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತ ಮತ್ತು ಮೇಲ್ಮೈ ಸುಳಿಗಾಳಿಯ ಪ್ರಭಾವದಿಂದ ಕರ್ನಾಟಕದಲ್ಲಿ ಮಳೆಯ ಅಬ್ಬರ ಮತ್ತೆ ಹೆಚ್ಚಾಗಲಿದೆ. ನೈಋತ್ಯ ಮುಂಗಾರು ಕೊಂಚ ದುರ್ಬಲಗೊಂಡಿದ್ದರೂ, ಇದರ ಪರಿಣಾಮವಾಗಿ ದಕ್ಷಿಣ ಒಳನಾಡಿನಾದ್ಯಂತ ಮಳೆ ಚುರುಕುಗೊಳ್ಳಲಿದ್ದು, ಪ್ರಮುಖವಾಗಿ ಅಕ್ಟೋಬರ್ 9ರಂದು ಬೆಂಗಳೂರು, ಮೈಸೂರು, ಮಂಡ್ಯ ಸೇರಿದಂತೆ ಆಯ್ದ 5 ಜಿಲ್ಲೆಗಳಲ್ಲಿ ಗುಡುಗು ಸಹಿತ ಭಾರಿ ಮಳೆಯಾಗುವ ಮುನ್ನೆಚ್ಚರಿಕೆಯನ್ನು ಭಾರತೀಯ ಹವಾಮಾನ ಇಲಾಖೆ () ನೀಡಿದೆ.

ಹವಾಮಾನ ಇಲಾಖೆಯ ವರದಿಯಂತೆ, ಅಕ್ಟೋಬರ್ 9ರಂದು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಮೈಸೂರು, ಮಂಡ್ಯ ಮತ್ತು ರಾಮನಗರ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಮಳೆಯ ಆರ್ಭಟ ಹೆಚ್ಚಿರಲಿದೆ. ಇದರೊಂದಿಗೆ ತುಮಕೂರು, ಚಿಕ್ಕಮಗಳೂರು, ಹಾಸನ ಮತ್ತು ಕೊಡಗು ಜಿಲ್ಲೆಗಳಲ್ಲೂ ಸಾಧಾರಣದಿಂದ ಉತ್ತಮ ಮಳೆಯಾಗುವ ನಿರೀಕ್ಷೆಯಿದ್ದು, ಅಕ್ಟೋಬರ್ 7 ರಿಂದ 10ರವರೆಗೆ ದಕ್ಷಿಣ ಒಳನಾಡಿನ ಹಲವೆಡೆ ಗುಡುಗು-ಮಿಂಚಿನ ಮುನ್ನೆಚ್ಚರಿಕೆ ಘೋಷಿಸಲಾಗಿದೆ. ಮೈಸೂರು, ಚಾಮರಾಜನಗರ, ಕೊಡಗು, ಹಾಸನ ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ಅಕ್ಟೋಬರ್ 7 ಮತ್ತು 8ರಂದು ಸಾಧಾರಣ ಮಳೆಯಾದರೆ, ಅಕ್ಟೋಬರ್ 9ರಂದು ಮಳೆಯ ತೀವ್ರತೆ ಹೆಚ್ಚಾಗಲಿದೆ. ಆದರೆ ಬಳ್ಳಾರಿ, ವಿಜಯನಗರ, ಚಿತ್ರದುರ್ಗ, ದಾವಣಗೆರೆ, ಕೋಲಾರ ಮತ್ತು ಚಿಕ್ಕಬಳ್ಳಾಪುರ ಭಾಗಗಳಲ್ಲಿ ಮುಖ್ಯವಾಗಿ ಒಣಹವೆ ಮುಂದುವರಿಯಲಿದೆ.

ರಾಜಧಾನಿ ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 48 ಗಂಟೆಗಳ ಕಾಲ ಆಕಾಶವು ಸಾಮಾನ್ಯವಾಗಿ ಮೋಡ ಕವಿದಿರಲಿದ್ದು, ಅಲ್ಲಲ್ಲಿ ಸಾಧಾರಣದಿಂದ ಭಾರಿ ಮಳೆಯಾಗುವ ಸಾಧ್ಯತೆಯಿದೆ. ನಗರದಲ್ಲಿ ಗರಿಷ್ಠ ತಾಪಮಾನ 31 ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ ತಾಪಮಾನ 21 ಡಿಗ್ರಿ ಸೆಲ್ಸಿಯಸ್ ದಾಖಲಾಗಲಿದೆ ಎಂದು ಹವಾಮಾನ ಕೇಂದ್ರದ ಮುಖ್ಯಸ್ಥ ಡಾ. ಎನ್. ಪುವಿಯರಸನ್ ತಿಳಿಸಿದ್ದಾರೆ.

ಉಳಿದಂತೆ ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಕೆಲ ಭಾಗಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದ್ದರೂ, ಉತ್ತರ ಕನ್ನಡ ಜಿಲ್ಲೆಯಲ್ಲಿ ಸಂಪೂರ್ಣ ಒಣಹವೆ ಇರಲಿದೆ. ಹಾಗೆಯೇ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಹಾಗೂ ಯಾದಗಿರಿ ಸೇರಿದಂತೆ ಉತ್ತರ ಒಳನಾಡಿನ ಎಲ್ಲಾ ಜಿಲ್ಲೆಗಳಲ್ಲಿ ಮುಂದಿನ ಒಂದು ವಾರ ಮಳೆಯಿಲ್ಲದೆ ಒಣಹವೆ ಮುಂದುವರಿಯಲಿದೆ. ಕಳೆದ ಒಂದು ದಿನದಲ್ಲಿ ಕೊಡಗು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಉತ್ತಮ ಮಳೆಯಾಗಿದ್ದು, ನಾಪೋಕ್ಲುವಿನಲ್ಲಿ 4 ಸೆಂ.ಮೀ, ಬೇಗೂರು ಮತ್ತು ಶ್ರೀಮಂಗಲದಲ್ಲಿ ತಲಾ 3 ಸೆಂ.ಮೀ ಹಾಗೂ ಕಳಸ, ಹುಡಿಕೇರಿ ಮತ್ತು ಸಂಪಾಜೆಯಲ್ಲಿ ತಲಾ 2 ಸೆಂ.ಮೀ ಮಳೆ ದಾಖಲಾಗಿರುವುದು ವರದಿಯಾಗಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR